ಸಂಪುಟ : 9 ಸಂಚಿಕೆ 51 ಪುಟ : 4 ಬೆಲೆ: 3.00 ರವಿವಾರ ಮಾರ್ಚ್ 24 2024 Mob : 9448326533- 9019256545 ಗದಗ

ಸಂಪಾದಕರು : ಎಚ್.ಎಮ್. ಶರೀಫನವರ್

# ವಿಜಯ ಸಾಕ್ಷಿ

ವಾಸ್ತವ, ವಸ್ತುನಿಷ್ಠ, ವಿಭಿನ್ನ... VIJAYA SAKSHI KANNADA DAILY ಕನ್ನಡ ದಿನಪತ್ರಿಕೆ

**WALK IN INTERVIEW**

Vacancy open

Bagalkot , Bijapur , Bidar , Kalaburgi, Mangalore , Belgaum

(Required For Bank Recovery and Collections)

- Filed collection Executive
- Two wheeler Must
- Salary up to 15000/- & Attractive Incentives Facility

Contact Number : 8310034934

Volume : 9 Issue : 51 Pages : 4 Price : 3.00 Sunday March 24 2024 Gadag RNINo:KARKAN/2015/63412 E-mail: vijayasakshidaily@gmail.com Post Regn.No:GDG/72/2023-25

### ವಿವಿಧ ಬೇಡಿಕೆಗಳ ಈಡೇರಿಕೆಗಾಗಿ ಮನವಿ ಸಲ್ಲಿಸಿ ಹೈರಾಣಾದ ಗ್ರಾಮಸ್ಥರು

# ತಿಮ್ಮಾಪೂರದಲ್ಲಿ ಲೋಕಸಭೆ ಚುನಾವಣೆ ಬಹಿಷ್ಕಾರ...?

**■ ವಿಜಯಸಾಕ್ಷಿ ಸುದ್ದಿ, ಗದಗ**

ಜನಸೇವೆಗಾಗಿಯೇ ಪ್ರತೀ ಚುನಾವಣೆಯ ಸಂದರ್ಭದಲ್ಲಿ ಮತದಾರ ಪ್ರಭುಗಳು ಆರಿಸಿ ಕಳಿಸಿದ ಬಹುತೇಕ ಜನಪ್ರತಿನಿಧಿಗಳು ಚುನಾವಣೆಯ ನಂತರ ತಾವು ನೀಡಿದ ಭರವಸೆಗಳು, ಸಾರ್ವಜನಿಕರು ನೀಡಿದ ಮನವಿ, ವಿನಂತಿಗಳನ್ನು ಅಷ್ಟೇ ಬೇಗ ಮರೆತುಬಿಡುತ್ತಾರೆ. ಅದರಲ್ಲೂ ಹಳ್ಳಿಗರು, ಕೃಷಿಕರ ಬೇಡಿಕೆಗಳ ಈಡೇರಿಕೆಯಂತೂ ಕನಸಿನ ಮಾತೇ ಸರಿ.


ಇಂತದೇ ವಿಷಯಕ್ಕಾಗಿ ಸಮಿಪದ ತಿಮ್ಮಾಪೂರ ಗ್ರಾಮದ ಶ್ರೀ ಕರಿಯಮ್ಮ ದೇವಿ ಸಮುದಾಯ ಭವನದಲ್ಲಿ ಗ್ರಾಮದ ವಿವಿಧ ಬೇಡಿಕೆಗಳ ಈಡೇರಿಕೆಗೆ ಆಗ್ರಹಿಸಿ ಲೋಕಸಭಾ ಚುನಾವಣೆ ಬಹಿಷ್ಕಾರ ಮಾಡುವ ಕುರಿತು ಪೂರ್ವಭಾವಿ ಸಭೆಯನ್ನು ಕರ್ನಾಟಕ ರಾಜ್ಯ ರೈತ ಸಂಘದ ಗ್ರಾಮ ಘಟಕ ಹಾಗೂ ಗ್ರಾಮ ಪಂಚಾಯಿತಿ ಅಧ್ಯಕ್ಷರು-ಉಪಾಧ್ಯಕ್ಷರು ಮತ್ತು ಸದಸ್ಯರು ಜಂಟಿಯಾಗಿ ಸಭೆ ನಡೆಸಿದರು.

ತಿಮ್ಮಾಪೂರ ಗ್ರಾಮದಲ್ಲಿ ಅನೇಕ ವರ್ಷಗಳಿಂದ ನೆನೆಗುದಿಗೆ ಬಿದ್ದಿರುವ ಕಾಮಗಾರಿಗಳಾದ ತಿಮ್ಮಾಪೂರ



ಗ್ರಾಮದಿಂದ ಕೋಟುಮಚಿಗಿ ಗ್ರಾಮಕ್ಕೆ ಸಂಪರ್ಕ ಕಲ್ಪಿಸುವ ರಸ್ತೆ ಡಾಂಬರೀಕರಣ, ಕಾಣೆಹಳ್ಳಕ್ಕೆ ಮೇಲು ಸೇತುವೆ ನಿರ್ಮಾಣ ಮಾಡುವುದು, ತಿಮ್ಮಾಪೂರ ಗ್ರಾಮದಿಂದ ಸೋಂಪೂರ ಗ್ರಾಮಕ್ಕೆ ಸಂಪರ್ಕ ಕಲ್ಪಿಸುವ ರಸ್ತೆ ಡಾಂಬರೀಕರಣ, ಪ್ರಾಥಮಿಕ ಆರೋಗ್ಯ ಕೇಂದ್ರ ನಿರ್ಮಾಣ ಮಾಡುವುದು, ನೂತನ ರಾಷ್ಟ್ರೀಕೃತ ಬ್ಯಾಂಕ್ ಶಾಖೆ ತೆರೆಯುವದು, ಕುಡಿಯುವ ನೀರಿನ ಯೋಜನೆಯಾದ ಜಿಜಿಎಂ ಕಾಮಗಾರಿಯಿಂದ ರಸ್ತೆ ದುರಸ್ತಿ, ನೀರು ಪೂರೈಕೆ ಮಾಡುವುದು, ಮಹಿಳೆಯರಿಗೆ ಸಾರ್ವಜನಿಕ ಶೌಚಾಲಯ ನಿರ್ಮಾಣ ಮಾಡುವುದು,

> ಈ ಎಲ್ಲಾ ಬೇಡಿಕೆಗಳ ಈಡೇರಿಕೆಗಾಗಿ ಹಲವಾರು ಬಾರಿ ಸಂಸದರಿಗೆ ಹಾಗೂ ಸಂಭಂದಪಟ್ಟ ಅಧಿಕಾರಿಗಳಿಗೆ ಮನವಿ ಮಾಡಿದರೂ ಯಾವುದೇ ಪ್ರಯೋಜನವಾಗಿಲ್ಲ. ಕಾರಣ, ಲೋಕಸಭಾ ಚುನಾವಣೆಯನ್ನು ಕರ್ನಾಟಕ ರಾಜ್ಯ ರೈತ ಸಂಘದ ಗ್ರಾಮ ಘಟಕದ ಅಧ್ಯಕ್ಷರು, ಉಪಾಧ್ಯಕ್ಷರು, ಸದಸ್ಯರು, ಮಹಿಳಾ ಘಟಕದ ಪದಾಧಿಕಾರಿಗಳು ಹಾಗೂ ಗ್ರಾಮಸ್ಥರಿಂದ ಗ್ರಾಮದ ಬಸ್ ನಿಲ್ದಾಣದ ಬಳಿ ರಸ್ತೆ ತಡೆದು ಪ್ರತಿಭಟನೆ ಮಾಡಲಾಗುವುದು ಎಂದು ಹೇಳಿದರು.




ಹರ್ಲಾಪೂರ ಹಾಗೂ ಹಳ್ಳಿಗುಡಿ ರಸ್ತೆ ಡಾಂಬರೀಕರಣ ಮಾಡುವುದು, ರೈತರು ತಮ್ಮ ಕೃಷಿ ಜಮೀನುಗಳಿಗೆ ಹೋಗುವ ದಾರಿಯನ್ನು ದುರಸ್ತಿ ಮಾಡುವುದು, ಎಂಎಸ್ಐಎಲ್ ಬಾರ್ ಬೇರೆಡೆಗೆ ಸ್ಥಳಾಂತರ ಮಾಡುವ ಕುರಿತು ಹಾಗೂ ಚುನಾವಣೆ ಬಹಿಷ್ಕಾರದ ಬ್ಯಾನರ್ ಹಾಕಿ ಮಾರ್ಚ್ 27ರಂದು ಗ್ರಾಮದ ಬಸ್ ನಿಲ್ದಾಣದ ಬಳಿ ರಸ್ತೆ ತಡೆದು ಪ್ರತಿಭಟನೆ ನಡೆಸಲು ಸಭೆಯಲ್ಲಿ ಒಮ್ಮತದ ನಿರ್ಣಯ ತೆಗೆದುಕೊಳ್ಳಲಾಯಿತು.

ಸಭೆಯ ಅಧ್ಯಕ್ಷತೆಯನ್ನು ರೈತ ಸಂಘದ ಗ್ರಾಮ ಘಟಕದ ಅಧ್ಯಕ್ಷ ಹುಚ್ಚೀರಪ್ಪ ಜೋಗಿನ ವಹಿಸಿದ್ದರು. ಈ ಸಂದರ್ಭದಲ್ಲಿ ರೈತ ಸಂಘದ ಗದಗ ಜಿಲ್ಲಾಧ್ಯಕ್ಷ ಯಲ್ಲಪ್ಪ ಎಚ್.ಬಾಬರಿ, ಗ್ರಾ.ಪಂ ಮಾಜಿ ಅಧ್ಯಕ್ಷ ನೀಲ್ಲಪ್ಪ ಗಾಜಿ, ಶರಣಪ್ಪ ಜೋಗಿನ, ಮಹೇಶ ಗಾಜಿ, ಬಾಳಪ್ಪ ಗಂಗರಾತ್ರಿ, ಮಲ್ಲಪ್ಪ ಮಾಳಗೋಂಡರ, ರಾಮಪ್ಪ ಗಾಣದ, ಗಿರೀಶ ಗುಡ್ಲಾನೂರ, ರಾಮಪ್ಪ ಹಚ್ಚಪ್ಪನವರ, ಶಶಿ ಲಕ್ಕುಂಡಿ, ಯಲ್ಲಪ್ಪ ಶಿಗರಗಡ್ಡಿ, ರಮೇಶ ಜೋಗಿನ, ಭೀಮಪ್ಪ ಕಂಕರಿ, ಶೇಖಪ್ಪ ಜೋಗಿನ, ಹನುಮಪ್ಪ ಕೊಪ್ಪಳ, ಮಹಿಳಾ ಸಂಘದ ಸದಸ್ಯರಾದ ಸೀತಾ ಜೋಗಿನ, ಸಾವಿತ್ರಿ ಕೊಪ್ಪದ, ಅನುಸೂಯವ್ವ ಗುಡ್ಲಾನೂರ, ಹನುಮವ್ವ ತಳವಾರ, ವಿಜಯಲಕ್ಷ್ಮೀ ಜೋಗಿನ, ಶಾಂತವ್ವ ಹಳ್ಳಿಕೇರಿ ಮುಂತಾದವರು ಹಾಜರಿದ್ದರು.

---

**ಲೋಕಸಭಾ ಚುನಾವಣೆ**

## ಬೆಂಗಳೂರು ದಕ್ಷಿಣದ 935 ಬೂತ್‌ಗಳಲ್ಲಿ ಮತದಾನ ಪ್ರಮಾಣ ಹೆಚ್ಚಳಕ್ಕೆ ತುಷಾರ್ ಗಿರಿನಾಥ್ ಸೂಚನೆ



**■ ವಿಜಯಸಾಕ್ಷಿ ಸುದ್ದಿ, ಬೆಂಗಳೂರು**

ಬೆಂಗಳೂರು ದಕ್ಷಿಣ ಲೋಕಸಭಾ ಕ್ಷೇತ್ರದ 1,897 ಮತಗಟ್ಟೆಗಳ ಪೈಕಿ 935 ಮತಗಟ್ಟೆಗಳಲ್ಲಿ 2019ರಲ್ಲಿ ಮತದಾನ ಪ್ರಮಾಣ ಕಡಿಮೆಯಾಗಿದೆ ಎಂದು ತಿಳಿಸಿದ ಜಿಲ್ಲಾ ಚುನಾವಣಾಧಿಕಾರಿ ತುಷಾರ್ ಗಿರಿನಾಥ್, ಮುಂಬರುವ ಸಾರ್ವತ್ರಿಕ ಚುನಾವಣೆಯಲ್ಲಿ ಶೇಕಡಾವರು ಮತದಾನ ಹೆಚ್ಚಿಸುವಂತೆ ಅಧಿಕಾರಿಗಳಿಗೆ ಸೂಚನೆ ನೀಡಿದ್ದಾರೆ.

ತರಬೇತಿ ಕಾರ್ಯಕ್ರಮದಲ್ಲಿ ಬೆಂಗಳೂರು ದಕ್ಷಿಣ ಕ್ಷೇತ್ರದ ಚುನಾವಣಾಧಿಕಾರಿಗಳನ್ನುದ್ದೇಶಿಸಿ ಮಾತನಾಡಿದ ಗಿರಿನಾಥ್, ಬೂತ್ ಮಟ್ಟದ ಅಧಿಕಾರಿಗಳು ಆಯಾ ಮತಗಟ್ಟೆ ವ್ಯಾಪ್ತಿಯ ಎಲ್ಲಾ ಮನೆಗಳಿಗೆ ಭೇಟಿ ನೀಡಿ ನಾಗರಿಕರಲ್ಲಿ ತಪ್ಪದೇ ಮತದಾನ ಮಾಡುವಂತೆ ಜಾಗೃತಿ ಮೂಡಿಸುವ ಕೆಲಸ ಮಾಡಬೇಕು ಎಂದರು.

ಮತದಾರರು ತಮ್ಮ ಮತದಾರರ ಗುರುತಿನ ಚೀಟಿ ಸಂಖ್ಯೆಯನ್ನು ನಮೂದಿಸುವ ಮೂಲಕ ಮತಗಟ್ಟೆಗಳು ಮತ್ತು ವಿಳಾಸಗಳ ಕುರಿತು ಹೆಚ್ಚಿನ ಮಾಹಿತಿಗಾಗಿ ಮತದಾರರ ಸಹಾಯವಾಣಿಗೆ ಭೇಟಿ ನೀಡಬಹುದು. ಮತಗಟ್ಟೆಗಳ ಬಗ್ಗೆ ಸಾರ್ವಜನಿಕರಿಗೆ ತಿಳಿಸಲು ಸಾಫ್ಟ್‌ವೇರ್ ಸಹ ಅಭಿವೃದ್ಧಿಪಡಿಸಲಾಗುತ್ತಿದೆ ಎಂದು ಅವರು ಹೇಳಿದರು.

ಇದಲ್ಲದೆ, ಬೂತ್ ಮಟ್ಟದಲ್ಲಿ ಸೂಕ್ಷ್ಮ ಮಟ್ಟದ ಕಾರ್ಯಕ್ರಮಗಳನ್ನು ರೂಪಿಸಬೇಕು ಮತ್ತು ಮತಗಟ್ಟೆಗಳಿಗೆ ನಿಗದಿಪಡಿಸಿದ ಮತದಾನದ ಶೇಕಡಾವಾರು ಪ್ರಮಾಣವನ್ನು ಹೆಚ್ಚಿಸಬೇಕು ಎಂದು ಹೇಳಿದರು.

---

## ರೇವಣಸಿದ್ಧೇಶ್ವರ ಜಯಂತಿ ನಿಮಿತ್ತ ಉಪನ್ಯಾಸ ಇಂದು

**■ ವಿಜಯಸಾಕ್ಷಿ ಸುದ್ದಿ, ಗದಗ**

ಶಿವಾನಂದ ನಗರದ ಬಸವ ಸಮುದಾಯ ಭವನದಲ್ಲಿ ಮಾ.24ರಂದು ಬೆಳಿಗ್ಗೆ 11ಕ್ಕೆ ನಡೆಯಲಿರುವ ಬಸವದಳದ 1586ನೇ ಶರಣ ಸಂಗಮದಲ್ಲಿ ರೇವಣಸಿದ್ಧೇಶ್ವರ ಜಯಂತಿ ನಿಮಿತ್ಯ ಉಪನ್ಯಾಸ ಕಾರ್ಯಕ್ರಮವನ್ನು ಏರ್ಪಡಿಸಲಾಗಿದೆ.

ಅಧ್ಯಕ್ಷತೆಯನ್ನು ನಿವೃತ್ತ ಶಿಕ್ಷಕ, ಶರಣ ಎಸ್.ಎನ್. ಹಕಾರಿ ವಹಿಸುವರು. ಶರಣ ಎನ್.ಎಚ್. ಹಿರೇಸಕ್ಕರಗೌಡ್ರ ಇವರು ಉಪನ್ಯಾಸ ಮಾಡುವರು. ಕಾರಣ ಬಸವದಳದ ಸದಸ್ಯರು, ಶರಣ ಸಾಹಿತ್ಯಾಭಿಮಾನಿಗಳು ಹಾಗೂ ಆಸಕ್ತರು ಭಾಗವಹಿಸಬೇಕೆಂದು ಸಂಘಟಕರ ಪರವಾಗಿ ಪ್ರಕಾಶ ಅಸುಂಡಿಯವರು ವಿನಂತಿಸಿದ್ದಾರೆ.

**ಸುಸಜ್ಜಿತ ಮನೆ ಮಾರಾಟಕ್ಕಿದೆ**

ಗದಗ ನಗರದ ಹೊಸ ಬಸ್ ಸ್ಟ್ಯಾಂಡ ಮುಖ್ಯ ರಸ್ತೆ, ಶಿವ ಸಾಯಿನಗರದ ಯಮಹಾ ಶೋ ರೂಂ ಹತ್ತಿರವಿರುವ (27 X 58) ಮೂರು ಅಂತಸ್ತಿನ ಸುಸಜ್ಜಿತ ಮಹಡಿ ಮನೆ ಮಾರಾಟಕ್ಕಿದೆ.

ನೆಲಮಹಡಿ – 2 ಮನೆಗಳು
ಮೊದಲನೆ ಮಹಡಿ – 2 ಮನೆಗಳು
ಎರಡನೆ ಮಹಡಿ – 2 ಮನೆಗಳು
ಮೂರನೆ ಮಹಡಿ – 1 ಮಮನೆ

ಆಸಕ್ತರು ಸಂಪರ್ಕಿಸಿರಿ :
ಮೊ : 9591325441
(ಸಂಜೆ : 6-00 ರಿಂದ 9-00ರ ವರೆಗೆ)

---

### ಅಂತಾರಾಷ್ಟ್ರೀಯ ಮಹಿಳಾ ದಿನಾಚರಣೆ ಕಾರ್ಯಕ್ರಮದಲ್ಲಿ ನ್ಯಾ.ಖಾದರಸಾಬ್ ಬೆನಕಟ್ಟಿ

# ದಿನಾಚರಣೆಗಳ ಹಿನ್ನೆಲೆ ಅರಿಯಿರಿ

**■ ವಿಜಯಸಾಕ್ಷಿ ಸುದ್ದಿ, ಗದಗ**

ಎಲ್ಲಾ ದಿನಾಚರಣೆಗಳನ್ನು ಕೇವಲ ಆಚರಣೆಗೆ ಸೀಮಿತವಾಗಿಸದೇ ಅದರ ಹಿನ್ನೆಲೆ, ಉದ್ದೇಶ ಏನು ಎಂಬುದನ್ನು ಎಲ್ಲರೂ ಆತ್ಮಾವಲೋಕನ ಮಾಡಿಕೊಳ್ಳಬೇಕು. ಆಚರಿಸಲು ಕಾರಣ ಹಾಗೂ ಉದ್ದೇಶವನ್ನು ಅರಿಯಬೇಕು ಎಂದು 1ನೇ ಅಪರ ಕೌಟುಂಬಿಕ ನ್ಯಾಯಾಲಯದ ಪ್ರಧಾನ ನ್ಯಾಯಾಧೀಶರಾದ ಖಾದರಸಾಬ ಹೆಚ್ ಬೆನಕಟ್ಟಿ ನುಡಿದರು.

ಅವರು ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ, ಗದಗ, ಜಿಲ್ಲಾ ನ್ಯಾಯವಾದಿಗಳ ಸಂಘ, ನ್ಯಾಯಾಂಗ ಇಲಾಖೆ, ಜಿಲ್ಲಾಡಳಿತ, ಜಿಲ್ಲಾ ಪಂಚಾಯತ ಹಾಗೂ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಇವರ ಸಹಯೋಗದಲ್ಲಿ ಹಮ್ಮಿಕೊಳ್ಳಲಾಗಿದ್ದ ಅಂತಾರಾಷ್ಟ್ರೀಯ ಮಹಿಳಾ ದಿನಾಚರಣೆ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದರು.

ಸುಮಾರು 18 ಹಾಗೂ 19ನೇ ಶತಮಾನಗಳಲ್ಲಿ ಮಹಿಳೆಯರ ಸ್ವಾತಂತ್ರ್ಯ ಹಾಗೂ ಹಕ್ಕುಗಳಿಗಾಗಿ ಅನೇಕ ಹೋರಾಟಗಳು ನಡೆದಿವೆ. ಅನೇಕ ಹೋರಾಟಗಳ ಫಲವಾಗಿ ಇಂದು




ಮಹಿಳೆಯರಿಗೆ ಒಳ್ಳೆಯ ಸ್ಥಾನ, ಹಕ್ಕುಗಳು ದೊರೆತಿವೆ ಎಂದರು.

ಅತಿಥಿಗಳಾಗಿ ಆಗಮಿಸಿದ್ದ ಪ್ರಧಾನ ಹಿರಿಯ ದಿವಾಣಿ ನ್ಯಾಯಾಧೀಶರು ಹಾಗೂ ಸಿಜೆಎಂ ಪ್ರೀತಿ ಸದ್ಗುರು ಸದರಜೋಷಿ ಮಾತನಾಡಿ, ಹೆಣ್ಣು ಎಂದಿಗೂ ಹಸನ್ಮುಖಿಯಾದ ಲಕ್ಷ್ಮಿಯಾಗಿರಬೇಕು. ಆದರೆ ಅಗತ್ಯ ಬಿದ್ದರೆ ದುರ್ಗೆಯ ಅವತಾರವನ್ನೂ ತಾಳಬೇಕು. ಇಂದು ಮಹಿಳೆ ಪುರುಷರಿಗೆ ಸರಿಸಮನಾಗಿ ಬೆಳೆದಿದ್ದಾಳೆ. ಯಶಸ್ವಿ ಮಹಿಳೆಯ ಸಾಧನೆಯ ಹಿಂದೆ ಪುರುಷರ ಪಾತ್ರವೂ ಇದೆ ಎಂದರು.

ಇನ್ನೋರ್ವ ಅತಿಥಿ, ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ ಕೆ.ಗುರುಪ್ರಸಾದ ಮಾತನಾಡಿ, ನಮ್ಮ ಸಂವಿಧಾನದಲ್ಲಿ ಮಹಿಳೆಯರು ಹಾಗೂ ಮಕ್ಕಳಿಗೆ ವಿಶೇಷವಾದ ಕಾನೂನುಗಳನ್ನು ರಚಿಸಲು ಅವಕಾಶವಿದೆ. ಅದರ ಅಡಿ ಈಗಾಗಲೇ ಅನೇಕ ಕಾನೂನುಗಳನ್ನು ಸರ್ಕಾರ ರಚಿಸಿದ್ದಾರೆ. ಅದರ ಅರಿವನ್ನು ಹೊಂದಬೇಕು. ಆದರೆ, ಇನ್ನೂ ಮನೆಯಲ್ಲಿ ಅಥವಾ ಮನೆಯಾಚೆಗೂ ಮಹಿಳೆ ಅನೇಕ ಸಮಸ್ಯೆಗಳನ್ನು ಎದುರಿಸುತ್ತಿದ್ದಾಳೆ. ಆದ್ದರಿಂದ ಹೆಣ್ಣು ಚಿಕ್ಕವಳಿದ್ದಾಗಿನಿಂದ ಧೈರ್ಯದಿಂದ ಸಮಸ್ಯೆ ಎದುರಿಸಲು ಕಲಿಸಬೇಕು ಎಂದರು.

> ಅಧ್ಯಕ್ಷತೆ ವಹಿಸಿದ್ದ ಜಿಲ್ಲಾ ವಕೀಲರ ಸಂಘದ ಅಧ್ಯಕ್ಷ ಐ.ಬಿ. ಹಿರೇಮನಿಪಾಟೀಲ ಮಾತನಾಡಿ, ಶಿಲಾಯುಗದ ಕಾಲದಿಂದಲೂ ಪುರುಷ ಪ್ರಧಾನತ್ವ ಇದೆ, ಇಂದೂ ಸಹ ಮುಂದುವರೆದಿದೆ. ಈ ಹಿನ್ನೆಲೆಯಲ್ಲಿ ಸ್ವಾತಂತ್ರ್ಯಾನಂತರ ಡಾ. ಬಿ.ಆರ್. ಅಂಬೇಡ್ಕರ ಅವರು ರಚಿಸಿದ ಸಂವಿಧಾನದಲ್ಲಿ ಮಹಿಳೆಯರಿಗೂ ಯಾವುದೇ ತಾರತಮ್ಯ ಇಲ್ಲದೇ ಸಮಾನ ಸ್ಥಾನ-ಮಾನ ನೀಡಿದ್ದಾರೆ. ಈ ಹಿನ್ನೆಲೆಯಲ್ಲಿ ಇಂದು ದೇಶದ ಅಭಿವೃದ್ಧಿಗೆ ಮಹಿಳೆಯರು ಎಲ್ಲಾ ರಂಗದಲ್ಲೂ ಪ್ರಮುಖ ಪಾತ್ರ ವಹಿಸಿದ್ದಾರೆ ಎಂದರು.

ಅತಿಥಿಗಳಾಗಿ ಪಾಲ್ಗೊಂಡಿದ್ದ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಉಪನಿರ್ದೇಶಕರಾದ ಪರಶುರಾಮ ಶೆಟ್ಟೆಪ್ಪನವರ ಮಾತನಾಡಿ, ಇಂದು ಮಹಿಳೆ ಎಲ್ಲಾ ಕ್ಷೇತ್ರಗಳಲ್ಲಿಯೂ ಮುಂದುವರೆದಿದ್ದು, ಅವರಿಗೆ ಪ್ರೋತ್ಸಾಹದ ಅವಶ್ಯಕತೆ ಇದೆ ಎಂದರು.

ವೇದಿಕೆಯ ಮೇಲೆ ನಿರೂಪಣಾಧಿಕಾರಿ ರಾಧಾ ಮಣ್ಣೂರ, ಡಾ. ಕಮಲವ್ವ ಬೈಲೂರ, ಸಿಡಿಪಿಒ ಎಚ್.ಎಸ್. ಜೋಗೇರ ಉಪಸ್ಥಿತರಿದ್ದರು. ಕಾರ್ಯಕ್ರದಲ್ಲಿ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಹಾಗೂ ನ್ಯಾಯಾಂಗ ಇಲಾಖೆ ಮಹಿಳಾ ಸಿಬ್ಬಂದಿಗಳು ಪಾಲ್ಗೊಂಡಿದ್ದರು.

ಪ್ರಾರಂಭದಲ್ಲಿ ಷಹನಾಜ ತೆಗ್ಗಿನಮನಿ ಪ್ರಾರ್ಥಿಸಿದರು. ವಿಜಯಲಕ್ಷ್ಮೀ ಗುರುಬಸವನಗೌಡರ ಕಾರ್ಯಕ್ರಮ ನಿರೂಪಿಸಿದರು.

---

## ಚೆಕ್‌ಪೋಸ್ಟ್ ತಪಾಸಣೆಯಲ್ಲಿ 1.49 ಲಕ್ಷ ರೂ ಪತ್ತೆ

**■ ವಿಜಯಸಾಕ್ಷಿ ಸುದ್ದಿ, ಧಾರವಾಡ**

ಲೋಕಸಭೆ ಚುನಾವಣೆ ಹಿನ್ನಲೆಯಲ್ಲಿ ಯಾವುದೇ ರೀತಿಯಲ್ಲಿ ಮಾದರಿ ನೀತಿ ಸಂಹಿತೆ ಉಲ್ಲಂಘನೆ ಆಗದಂತೆ ಮತ್ತು ಅಕ್ರಮಗಳನ್ನು ತಡೆಗಟ್ಟಲು ಧಾರವಾಡ ಜಿಲ್ಲಾಡಳಿತ ಅಗತ್ಯ ಕ್ರಮಕೈಗೊಂಡಿದೆ. ಶನಿವಾರ ಸಂಜೆ ಹಳಿಯಾಳ ಚೆಕ್‌ಪೋಸ್ಟ್‌ನಲ್ಲಿ ಅಧಿಕಾರಿಗಳು ಕಾರ್ ತಪಾಸಣೆ ಮಾಡುವ ಸಂದರ್ಭದಲ್ಲಿ ಮಹಮ್ಮದ ಶಂಶುದ್ದೀನ್ ಎಂಬವರ ಬಳಿ ಸರಿಯಾದ ದಾಖಲೆ ಇರದ ರೂ.1.49 ಹಣ ಸಿಕ್ಕಿದ್ದು, ಸೀಜ್ ಮಾಡಿ, ಖಜಾನೆಯಲ್ಲಿ ಠೇವಣಿ ಮಾಡಲಾಗುತ್ತದೆ ಎಂದು ಜಿಲ್ಲಾ ಚುನಾವಣಾಧಿಕಾರಿಗಳು ತಿಳಿಸಿದ್ದಾರೆ.

ಈ ಕುರಿತು ಪ್ರಕಟಣೆ ನೀಡಿರುವ ಅವರು, ಅಳ್ನಾವರ ಪಟ್ಟಣ ನಿವಾಸಿಯಾದ ಮಹಮ್ಮದ ಶಂಶುದ್ದೀನ್ ಎಂಬವರು ಹುಬ್ಬಳ್ಳಿಯಿಂದ ಕಾರ್ ಮೂಲಕ ಅಳ್ನಾವರಗೆ ತೆರಳುವಾಗ ಹಳಿಯಾಳ ಚೆಕ್ ಪೋಸ್ಟ್‌ದಲ್ಲಿ ಅವರ ಕಾರ್ ತಪಾಸಣೆ ಮಾಡಿದಾಗ ಅವರ ಬಳಿ ರೂ.1.49 ಲಕ್ಷ ನಗದು ಹಣ ದೊರಕಿದೆ. ಅವರ ಬಳಿ ಇದ್ದ ದಾಖಲೆಗಳಿಗೂ ಮತ್ತು ಅವರಲ್ಲಿ ದೊರೆತ ಹಣಕ್ಕೂ ಸರಿಯಾದ ಹೊಂದಾಣಿಕೆ ಆಗದೇ ಇರುವದರಿಂದ ಅವರಲ್ಲಿನ ಹಣವನ್ನು ಮಾಜಿಸ್ಟ್ರೇಟ್ ನೇತೃತ್ವದ ಎಫ್‌ಎಸ್‌ಟಿ ತಂಡದ ಅಧಿಕಾರಿಗಳು ಪತ್ತೆ ಹಚ್ಚಿದ್ದು, ಎಫ್‌ಎಸ್‌ಟಿ ತಂಡವು ಪತ್ತೆಯಾದ ಹಣವನ್ನು ಖಜಾನೆಯಲ್ಲಿ ಠೇವಣಿ ಮಾಡಲು ಕ್ರಮವಹಿಸಿದೆ. ವಿಚಾರಣೆ ನಡೆಸಿ ಮುಂದಿನ ಕ್ರಮ ಜರುಗಿಸಲು ಸೀಜರ್ ಕಮಿಟಿಗೆ ಸೂಚಿಸಲಾಗಿದೆ ಎಂದು ಜಿಲ್ಲಾ ಚುನಾವಣಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.




---

### ನಕಲು ತಡೆಗೆ ಸಿ.ಸಿ ಟಿ.ವಿ ಕಣ್ಗಾವಲು | ಪರೀಕ್ಷಾ ಕೊಠಡಿಗಳ ದೃಶ್ಯ ಜಿ.ಪಂ ಕಚೇರಿಗೆ ವೆಬ್‌ಕಾಸ್ಟ್

## ಎಸ್‌ಎಸ್‌ಎಲ್‌ಸಿ ಪರೀಕ್ಷೆಗೆ ಕೇಂದ್ರಗಳು ಸಜ್ಜು



**■ ವಿಜಯಸಾಕ್ಷಿ ಸುದ್ದಿ, ಲಕ್ಕುಂಡಿ**

ಇದೇ ಮಾರ್ಚ್ 25ರಿಂದ ಏಪ್ರಿಲ್ 6ವರೆಗೆ ನಡೆಯುವ ಎಸ್‌ಎಸ್‌ಎಲ್‌ಸಿ ಪರೀಕ್ಷೆಗೆ ಲಕ್ಕುಂಡಿಯಲ್ಲಿ ತೆರೆಯಲಾಗಿರುವ ಎರಡು ಪರೀಕ್ಷಾ ಕೇಂದ್ರಗಳು ಪರೀಕ್ಷೆ ಬರೆಯುವ ಎಲ್ಲಾ ವಿದ್ಯಾರ್ಥಿಗಳಿಗೆ ಬೇಕಾಗುವ ಮೂಲಭೂತ ಸೌಲಭ್ಯಗಳನ್ನು ಒದಗಿಸಲು ಸಜ್ಜುಗೊಂಡಿದ್ದು, ಈ ಸಲ ನಕಲು ತಡೆಗಟ್ಟಲು ಸಿ.ಸಿ ಟಿ.ವಿ ದೃಶ್ಯವನ್ನು ವೆಬ್ ಕಾಸ್ಟಿಂಗ್‌ಗೆ ಅಳವಡಿಸಿದ್ದು ವಿಶೇಷವಾಗಿದೆ.

ಮಾರುತಿ ನಗರದಲ್ಲಿರುವ ಜನತಾ ವಿದ್ಯಾವರ್ಧಕ ವಿದ್ಯಾ ಸಂಸ್ಥೆಯ ಬಿ.ಎಚ್. ಪಾಟೀಲ ಸಂಯುಕ್ತ ಪದವಿ ಪೂರ್ವ ಕಾಲೇಜ್‌ನಲ್ಲಿ 12 ಕೊಠಡಿಗಳು ಹಾಗೂ ಬಾಲಕಿಯರ ಸರಕಾರಿ ಪ್ರೌಢಶಾಲೆಯಲ್ಲಿ 8 ಕೊಠಡಿಗಳನ್ನು ತೆರೆಯಲಾಗಿದೆ. 211 ಬಾಲಕರು, 247 ಬಾಲಕಿಯರು ಸೇರಿ ಒಟ್ಟು 458 ವಿದ್ಯಾರ್ಥಿಗಳು ಪರೀಕ್ಷೆಯನ್ನು ಬರೆಯಲಿದ್ದಾರೆ. ಲಕ್ಕುಂಡಿ ಕ್ಲಸ್ಟರ್‌ಗೆ ಒಳಪಟ್ಟಿರುವ ಲಕ್ಕುಂಡಿಯ ಬಾಲಕಿಯರ ಸರಕಾರಿ ಪ್ರೌಢಶಾಲೆ, ಬಿ.ಎಚ್. ಪಾಟೀಲ ಪ್ರೌಢಶಾಲೆ, ರಾಣಿ ಚನ್ನಮ್ಮ ವಸತಿ ಶಾಲೆ ಸೇರಿದಂತೆ ತಿಮ್ಮಾಪೂರ, ಹರ್ಲಾಪೂರ, ಕಣಗಿನಹಾಳ, ಹಾತಲಗೇರಿ, ಅ ಡ ವಿ ಸೋ ಮಾ ಪೂ ರ ಪ್ರೌಢಶಾಲೆಗಳ ವಿದ್ಯಾರ್ಥಿಗಳು ಈ ಎರಡು ಕೇಂದ್ರದಲ್ಲಿ ಪರೀಕ್ಷೆಯನ್ನು ಬರೆಯಲಿದ್ದಾರೆ. ಒಂದು ಕೊಠಡಿಯಲ್ಲಿ 24 ವಿದ್ಯಾರ್ಥಿಗಳು ಪರೀಕ್ಷೆಯನ್ನು ಬರೆಯಲಿದ್ದು, 30 ಮೇಲ್ವಿಚಾರಕರು, ಇಬ್ಬರು ಮೊಬೈಲ್ ಸ್ವಾಧೀನಾಧಿಕಾರಿಗಳು, ಇಬ್ಬರು ಸೀಟಿಂಗ್ ಸ್ಕ್ವಾಡ್, ಇಬ್ಬರು ಕಸ್ಟೋಡಿಯನ್‌ಗಳನ್ನು ನೇಮಿಸಲಾಗಿದೆ.

> **ವೆಬ್ ಕಾಸ್ಟ್ ಕಣ್ಗಾವಲು**
>
> ಈ ಸಲದ ಎಸ್‌ಎಸ್‌ಎಲ್‌ಸಿ ಪರೀಕ್ಷಾ ಕೇಂದ್ರಗಳಲ್ಲಿ ನಕಲು ತಡೆಗಟ್ಟಲು ಪ್ರತಿಯೊಂದು ಕೊಠಡಿಯಲ್ಲಿ ಸಿ.ಸಿ. ಕ್ಯಾಮರಾ ಅಳವಡಿಸಿಲಾಗಿದ್ದು, ಇದರಲ್ಲಿ ದಾಖಲಾಗುವ ದೃಶ್ಯಾವಳಿಗಳನ್ನು ಜಿ.ಪಂ ಕಚೇರಿಯ ಪರೀಕ್ಷಾ ಅಧಿಕಾರಿಗಳು ವೀಕ್ಷಿಸಲು ವೆಬ್‌ಕಾಸ್ಟಿಂಗ್ ವ್ಯವಸ್ಥೆ ಮಾಡಲಾಗಿದೆ. ಪರೀಕ್ಷಾ ಕೇಂದ್ರ ಸುತ್ತಲೂ 200 ಮೀಟರ್ ವ್ಯಾಪ್ತಿಯಲ್ಲಿ ಪ್ರತಿಬಂಧಕಾಜ್ಞೆ ಹೊರಡಿಸಲಾಗಿದ್ದು, ಶಾಂತಿಯುತವಾಗಿ ಪರೀಕ್ಷೆ ನಡೆಯಲು ಪೊಲೀಸ್ ಬಂದೋಬಸ್ತ ವ್ಯವಸ್ಥೆ ಮಾಡಲಾಗಿದೆ ಎಂದು ಕೇಂದ್ರದ ಅಧೀಕ್ಷಕರಾದ ಎ.ಎನ್. ಪೂಜಾರ ಹಾಗೂ ವೈ. ಎಚ್. ತೆಕ್ಕಲಕೋಟಿ ತಿಳಿಸಿದ್ದಾರೆ.

## ಸಂಪಾದಕೀಯ

# ಗೆಲುವಿಗಾಗಿ ಕುಟುಂಬ ರಾಜಕಾರಣ

ಕರ್ನಾಟಕದ 28 ಲೋಕಸಭೆ ಕ್ಷೇತ್ರಗಳಿಗೆ ಕಾಂಗ್ರೆಸ್ ತನ್ನ ಅಭ್ಯರ್ಥಿಗಳನ್ನು ಅಂತಿಮಗೊಳಿಸಿದೆ. ಕಾಂಗ್ರೆಸ್ಸಿನ 2ನೇ ಪಟ್ಟಿಯಲ್ಲಿ ಒಟ್ಟು 17 ಜನರಿಗೆ ಮಣೆ ಹಾಕಲಾಗಿದೆ. ಮೊದಲ ಪಟ್ಟಿಯ ಏಳು ಸೇರಿದಂತೆ ಒಟ್ಟು 24 ಕ್ಷೇತ್ರದ ಅಭ್ಯರ್ಥಿಗಳು ಚುನಾವಣೆ ಕಣಕ್ಕೆ ಧುಮುಕಿದ್ದಾರೆ.

ಒಟ್ಟಾರೆ 24 ಕ್ಷೇತ್ರಗಳ ಅಭ್ಯರ್ಥಿಗಳ ಹೆಸರನ್ನು ಗಮನಿಸಿದಾಗ ಕುಟುಂಬ ರಾಜಕಾರಣಕ್ಕೆ ಕಾಂಗ್ರೆಸ್ ಮತ್ತೊಮ್ಮೆ ಜೈಕಾರ ಹಾಕಿರುವುದು ಸ್ಪಷ್ಟವಾಗಿದೆ. ಹಾಲಿ ಶಾಸಕರು ಸಚಿವರ ಮಕ್ಕಳಿಗೆ ಟಿಕೆಟ್ ಘೋಷಣೆ ಮಾಡಲಾಗಿದೆ. ಅಷ್ಟೇ ಅಲ್ಲದೆ ಮಾಜಿ ಶಾಸಕರ ಮಕ್ಕಳಿಗೂ ಆದ್ಯತೆ ನೀಡಿರುವುದು ಅತ್ಯಂತ ಸ್ಪಷ್ಟವಾಗಿದೆ.

ಹೀಗೆ ಕಾಂಗ್ರೆಸ್ ಅಳೆದು ತೂಗಿ, ಹಾಲಿ ಮತ್ತು ಮಾಜಿ ಸಚಿವರು, ಶಾಸಕರ ಮಕ್ಕಳಿಗೆ ಮಣೆ ಹಾಕಿರುವುದು ನೋಡಿದರೆ, ಕಾಂಗ್ರೆಸಿಗೆ ಯಾವುದೇ ರೀತಿಯಿಂದಾದರೂ ಗೆಲುವು ಅಗತ್ಯವಾಗಿದೆ ಎನ್ನುವುದನ್ನು ಸೂಚಿಸುತ್ತದೆ.

ಸುದೀರ್ಘ ಅವಧಿಗೆ ಆಡಳಿತ ನಡೆಸಿದ ಕಾಂಗ್ರೆಸ್ ಪಕ್ಷ ಇವತ್ತು ವಿರೋಧಪಕ್ಷದ ಸ್ಥಾನದಲ್ಲೂ ಕುಳಿತುಕೊಳ್ಳಲು ಸಾಧ್ಯವಾಗದಷ್ಟು ಕುಸಿತ ಕಂಡಿದೆ. ಪಕ್ಷ ಮತ್ತೊಮ್ಮೆ ಪ್ರವರ್ಧಮಾನಕ್ಕೆ ಬರಬೇಕಾದರೆ ಗೆಲ್ಲುವ ಅಭ್ಯರ್ಥಿಗೆ ಮಣೆ ಹಾಕುವುದು ಅನಿವಾರ್ಯವಾಗಿದೆ.

ಆ ಕಾರಣಕ್ಕಾಗಿ ಗೆಲ್ಲುವ ಅಭ್ಯರ್ಥಿ ಎನ್ನುವುದಕ್ಕಿಂತ ಗೆಲ್ಲಿಸಿಕೊಂಡು ಬರುವಂತಹ ಸಚಿವರು ಮತ್ತು ಶಾಸಕರ ಮಕ್ಕಳಿಗೆ, ಅಳಿಯಂದಿರಿಗೆ ಟಿಕೆಟ್ ಕೊಟ್ಟು ಗೆಲ್ಲಿಸಿಕೊಂಡು ಅಥವಾ ಗೆದ್ದುಕೊಂಡು ಬರುವ ಟಾಸ್ಕ್ ನೀಡಿದೆ.

ಹಾಲಿ ಸಚಿವರು ತಮ್ಮ ಕ್ಷೇತ್ರದ ಅಭ್ಯರ್ಥಿಯನ್ನ ಗೆಲ್ಲಿಸಿಕೊಂಡು ಬರದಿದ್ದರೆ, ಸಚಿವ ಸ್ಥಾನವನ್ನ ತ್ಯಾಗ ಮಾಡಬೇಕಾದ ಪರಿಸ್ಥಿತಿ ಬರಲಿದೆ ಎನ್ನುವ ಸೂಚನೆ ಹೈಕಮಾಂಡ್ ನಿಂದ ಬಂದಿದೆ. ಹೀಗಾಗಿ ಅನೇಕ ಸಚಿವರು ಪಕ್ಷದ ಅಭ್ಯರ್ಥಿ ಪರ ಈಗಲೇ ಬಿರುಸಿನ ಪ್ರಚಾರ ಆರಂಭಿಸಿದ್ದಾರೆ.

ಅದರಲ್ಲೂ ಯಾರೆಲ್ಲ ತಮ್ಮ ಪುತ್ರ, ಪತ್ನಿ, ಸಹೋದರ, ಅಳಿಯನಿಗೆ ಟಿಕೆಟ್ ಗಿಟ್ಟಿಸಿಕೊಂಡಿದ್ದಾರೂ ಅವರೆಲ್ಲರೂ ಒಂದು ಹೆಜ್ಜೆ ಮುಂದೆ ಹೋಗಿ, ಚುನಾವಣಾ ರಣಕಣದಲ್ಲಿ ಸಕ್ರಿಯರಾಗಿ ಕೆಲಸ ಮಾಡುತ್ತಿದ್ದಾರೆ.

ಸದ್ಯ ಬಿಜೆಪಿಯಲ್ಲಿಯೂ ಈ ಕುಟುಂಬ ರಾಜಕಾರಣ ಬೇರೂರಿವ ಕಾರಣ, ಕಾಂಗ್ರೆಸ್ಸಿನ ಕುಟುಂಬ ರಾಜಕಾರಣದ ಬಗ್ಗೆ ಯಾರೊಬ್ಬರೂ ಟೀಕೆ ಮಾಡುತ್ತಿಲ್ಲ. ಕಾಂಗ್ರೆಸ್‌ನ ಪರಿವಾರ ರಾಜಕಾರಣ ಟೀಕೆ ಮಾಡುವ ನೈತಿಕತೆಯನ್ನು ಬಿಜೆಪಿ ಕಳೆದುಕೊಂಡಿದೆ.

ಆದರೆ ಜನಸಾಮಾನ್ಯರು ಇದೆಲ್ಲವನ್ನ ಅರ್ಥ ಮಾಡಿಕೊಂಡು, ಮತದಾನ ಮಾಡಿದರೆ ದೇಶದಲ್ಲಿ ಸುಂದರ ಪ್ರಜಾಪ್ರಭುತ್ವ ನಿರ್ಮಾಣ ಸಾಧ್ಯವಾಗಲಿದೆ.

---

### ಮಾರ್ಚ್ 25ರಂದು ಹೋಳಿ ಹುಣ್ಣಿಮೆ ಹಬ್ಬದ ನಿಮಿತ್ತ ಸಾಂದರ್ಭಿಕ ಲೇಖನ

# ರಂಗು ರಂಗಿನ ಬಣ್ಣದಲ್ಲಿ ಸಹೋದರತೆಯ ಚಿತ್ತಾರ

ಹಬ್ಬ ಎನ್ನುವುದು ಪರ್ವ ಎನ್ನುವ ಶಬ್ದದಿಂದ ಬಂದಿದೆ. ಹಬ್ಬ-ಹರಿದಿನಗಳ ಆಚರಣೆ ಎಲ್ಲ ಧರ್ಮಗಳಲ್ಲೂ ಕಂಡು ಬರುತ್ತದೆ. 'ಉತ್ಸವಪ್ರಿಯಾಃ ಖಲು ಮನುಷ್ಯಾಃ' ಎಂದು ಮಹಾಕವಿ ಕಾಳಿದಾಸನೂ ಈ ಸತ್ಯವನ್ನು ಗಮನಿಸಿದ್ದಾನೆ. ಅವು ಜೀವನದಲ್ಲಿನ ವಿಶೇಷವಾದ ಸಂತೋಷದ ಸಂದರ್ಭಗಳಾಗಿವೆ. ಹಬ್ಬಗಳ ಆಚರಣೆ ಸಂದರ್ಭದಲ್ಲಿ ಬಂಧು-ಬಳಗ, ಇಷ್ಟಮಿತ್ರರು ಮುಂತಾದವರು ಒಟ್ಟಾಗಿ ಸೇರುವುದು ವಾಡಿಕೆ ಎಂದು ಅವರು ಹೇಳಿದ್ದಾರೆ. ಹೀಗೆ ಹಬ್ಬಗಳಲ್ಲಿ ಒಂದಾದ ಹೋಳಿ ಹುಣ್ಣಿಮೆ ಹಬ್ಬವೂ ಕೂಡ ವಿಶೇಷವೆನಿಸುತ್ತದೆ.

ಹೋಳಿಯನ್ನು ಬಣ್ಣಗಳ ಹಬ್ಬ ಎಂದು ಕರೆಯಲಾಗುತ್ತದೆ. ಇದು ಭಾರತದ ಪ್ರಮುಖ ಹಬ್ಬಗಳಲ್ಲಿ ಒಂದಾಗಿದೆ. ಹೋಳಿ ಹಬ್ಬವನ್ನು ಆಚರಿಸುವ ಜನರು ಬಣ್ಣಗಳೊಂದಿಗೆ ಆಟವಾಡಲು ಮತ್ತು ರುಚಿಕರವಾದ ಭಕ್ಷ್ಯಗಳನ್ನು ಆನಂದಿಸಲು ಉತ್ಸಾಹದಿಂದ ಪ್ರತಿ ವರ್ಷ ಕಾಯುತ್ತಾರೆ. ಈ ಹಬ್ಬ ಸುಂದರ ಸ್ನೇಹದ, ಪ್ರೀತಿಯ ಸಂಕೇತವೂ ಹೌದು.

ಪುರಾಣದಲ್ಲಿ ಉಲ್ಲೇಖವಿರುವ ಕಾಮದಹನದಲ್ಲಿ ತಾರಕಾಸುರನೆಂಬ ರಾಕ್ಷಸ ರಾಜ ಬ್ರಹ್ಮನ ವರಬಲದ ಸೊಕ್ಕಿನಿಂದ ಲೋಕದಲ್ಲಿ ಮೆರೆಯತೊಡಗಿದಾಗ, ಆತನ ಉಪಟಳ ತಾಳಲಾರದೆ, ಅವನ ಸಂಹಾರಕ್ಕೆ ದೇವತೆಗಳು ಉಪಾಯ ಹೂಡುತ್ತಾರೆ. ಶಿವನಿಗೆ ಜನಿಸಿದ ಏಳು ದಿನದ ಮಗುವಿನಿಂದ ಮಾತ್ರವೇ ತನಗೆ ಸಾವು ಎಂಬ ವರಬಲವೇ ಆತನ ಮದಕ್ಕೆ ಕಾರಣವಾಗಿರುತ್ತದೆ. ಆದರೆ ಆ ಸಂದರ್ಭದಲ್ಲಿ ಶಿವನು ದಕ್ಷ ಯಜ್ಞದಲ್ಲಿ ದಾಕ್ಷಾಯಿಣಿಯನ್ನು ಕಳೆದುಕೊಂಡು ಭೋಗಸಮಾಧಿಯಲ್ಲಿದ್ದ ಕಾರಣ, ಅವರಿಬ್ಬರೂ ಒಂದುಗೂಡುವಂತಿರಲಿಲ್ಲ. ಆಗ ದೇವತೆಗಳು ಕಾಮ (ಮನ್ಮಥ)ನ ಮೊರೆ ಹೋದರು.



ತತ್ಫಲವಾಗಿ ತನ್ನ ನಿರ್ನಾಮದ ಅರಿವಿದ್ದರೂ, ಲೋಕಕಲ್ಯಾಣವೆಂಬ ಅತಿಶಯವಾದ ಪರೋಪಕಾರಾರ್ಥವಾಗಿ ಕಾಮನು ತನ್ನ ಹೂಬಾಣಗಳಿಂದ ಶಿವನನ್ನು ಬಡಿದೆಬ್ಬಿಸಿ, ತಪೋಭಂಗ ಮಾಡುತ್ತಾನೆ. ಕೆರಳಿ ಮೂರನೇ ಚಕ್ಷುವನ್ನು ತೆರೆದ ಶಿವನು, ಈಶ್ವರನ ಕ್ರೋಧಾಗ್ನಿಗೆ ಕಾಮನು ಸುಟ್ಟು ಭಸ್ಮವಾಗುತ್ತಾನೆ. ಕಾಮನರಸಿ ರತಿದೇವಿಯು ಪರಿಪರಿಯಾಗಿ ಶಿವನಲ್ಲಿ ಪತಿಭಿಕ್ಷೆ ಯಾಚಿಸಲು, ಕಾಮನು ಅನಂಗ(ಮನ್ಮಥ)ನಾಗಿಯೇ ಇರುತ್ತಾನೆ. ಆದರೆ ಪತ್ನಿಗೆ ಮಾತ್ರ ಶರೀರಿಯಾಗಿ ಕಾಣಿಸುತ್ತಾನೆ. ಇದರಿಂದಾಗಿ ಶಿವನು ಅಭಯ ನೀಡಿದನೆಂಬುದು ಪುರಾಣ ಕಥನದಲ್ಲಿ ಹೇಳಲಾಗಿದೆ.

ಹೋಳಿ ಹಬ್ಬವು ಕೆಟ್ಟದ್ದರ ಮೇಲೆ ವಿಜಯ ಸಾಧಿಸುವ ಒಳ್ಳೆಯತನ ಆಚರಿಸುವ ಜನಪ್ರಿಯ ಹಬ್ಬವಾಗಿದೆ. ಇತ್ತೀಚಿನ ವರ್ಷಗಳಲ್ಲಿ ಹಬ್ಬವು ಯುರೋಪ್ ಮತ್ತು ಉತ್ತರ ಅಮೇರಿಕಾದ ಭಾಗಗಳಿಗೂ ಹಬ್ಬಿದ್ದು ಪ್ರೀತಿ, ಉಲ್ಲಾಸ ಮತ್ತು ಬಣ್ಣಗಳ ವಸಂತ ಆಚರಣೆಯಾಗಿ ಹರಡಿದೆ. ಈ ಹಬ್ಬದ ಸಂದೇಶ ಒಂದೇ. ಅದು ಕೆಟ್ಟದ್ದನ್ನು ಸುಟ್ಟುಬಿಡುವುದು. ಕಾಮಕ್ರೋಧಾದಿ ಅರಿಷಡ್ವರ್ಗಗಳನ್ನು ಅಗ್ನಿಕುಂಡದಲ್ಲಿ ಸುಟ್ಟು, ಸದಾಚಾರವನ್ನು ರೂಢಿಸಿಕೊಳ್ಳುವುದು. ಆಸುರೀ ಶಕ್ತಿಗಳ ನಿರ್ನಾಮದ ದ್ಯೋತಕವಾಗಿ ಹೋಳಿ ಅಂದರೆ ಉತ್ಸವಾಗ್ನಿ ಹಾಕುವ ಪದ್ಧತಿ ಉತ್ತರ ಭಾರತದಲ್ಲಿ ಹೆಚ್ಚಾಗಿ ಆಚರಣೆಯಲ್ಲಿದೆ.

ಈ ದಿನದಂದು ಅಕ್ಕಿಹಿಟ್ಟು ಮತ್ತು ಅರಿಶಿನ ಬೆರೆಸಿದ ಗುಲಾಲು ತಯಾರಿಸಿ, ಬಿದಿರಿನಿಂದ ಪಿಚಕಾರಿ ತಯಾರಿಸಿ, ಮಕ್ಕಳಿಂದ ಹಿಡಿದು ಹಿರಿಯರವರೆಗೂ ಬಣ್ಣದಾಟ ಆಡುವರು. ನಂತರ ಅಭ್ಯಂಜನ ಸ್ನಾನ ಮಾಡಿ ದೇವರಲ್ಲಿ ಪ್ರಾರ್ಥಿಸಿ ಮನೆಗಳಲ್ಲಿ ವಿಶೇಷ ಅಡಿಗೆಗಳನ್ನು ತಯಾರಿಸುವರು. ಉತ್ತರ ಪ್ರದೇಶದಲ್ಲಿ ಜೋಳದ ಹಿಟ್ಟಿನ ಗುಜಿಯಾ ಹಾಗೂ ಪಾಪಡೆ ಜನಪ್ರಿಯವಾಗಿದೆ. ದೆಹಲಿ ಮುಂತಾದ ನಗರಗಳಲ್ಲಿ ರಂಗಪಂಚಮಿ ದಿನದಂದು ಹತ್ತು ತಲೆಯ ರಾವಣನ ಮೂರ್ತಿಯನ್ನು ಬಿದಿರಿನಿಂದ ತಯಾರಿಸಿ, ಅದಕ್ಕೆ ಹಳೇ ಬಟ್ಟೆಗಳನ್ನೆಲ್ಲ ಧರಿಸಿ ಗಣ್ಯರನ್ನೆಲ್ಲ ಕರೆದು, ಅವರ ಸಮ್ಮುಖದಲ್ಲಿ ಲಂಕೇಶನನ್ನು ಸುಡುವುದು ವಾಡಿಕೆ.

ಒಟ್ಟಾರೆಯಾಗಿ ಹೋಳಿ ಹಬ್ಬವು ಪ್ರೀತಿ ಮತ್ತು ಸಹೋದರತ್ವವನ್ನು ಹರಡುತ್ತದೆ. ಇದು ದೇಶದಲ್ಲಿ ಸಾಮರಸ್ಯ ಮತ್ತು ಸಂತೋಷವನ್ನು ತರುತ್ತದೆ. ಹೋಳಿಯು ಕೆಡುಕಿನ ಮೇಲೆ ಒಳಿತಿನ ವಿಜಯವನ್ನು ಸಂಕೇತಿಸುತ್ತದೆ.ಈ ವರ್ಣರಂಜಿತ ಹಬ್ಬವು ಜನರನ್ನು ಒಂದುಗೂಡಿಸುತ್ತದೆ ಮತ್ತು ಜೀವನದಿಂದ ಎಲ್ಲಾ ರೀತಿಯ ನಕಾರಾತ್ಮಕತೆಯನ್ನು ತೆಗೆದುಹಾಕುತ್ತದೆ.ಆ ಮೂಲಕ ಕೆಡುಕಿಗೆ ಯಾವತ್ತೂ ಸೋಲು ಕಾದಿದೆ ಎಂಬ ಸಂದೇಶ ಸಾರುವ ಹಬ್ಬವಾಗಿ ಜನಜನಿತವಾಗಿದೆ.

ಬಣ್ಣಗಳ ಹಬ್ಬ ನಿಮ್ಮ ಬದುಕಿನಲ್ಲಿ ಖುಷಿಯ ಚಿತ್ತಾರವನ್ನು ಮೂಡಿಸಲಿ. ಕಷ್ಟಗಳೆಲ್ಲಾ ಮಂಜಿನಂತೆ ಕರಗಿ, ನೆಮ್ಮದಿಯೊಂದೇ ನಿಮ್ಮ ಬಾಳಿನಲ್ಲಿ ಶಾಶ್ವತವಾಗಲಿ. ನಿಮಗೂ ನಿಮ್ಮ ಕುಟುಂಬಕ್ಕೂ ಹೋಳಿ ಹಬ್ಬದ ಶುಭಾಶಯಗಳು. ಪರಿಸರ ಸ್ನೇಹಿ ಬಣ್ಣ ಬಳಸೋಣ.



– **ಬಸವರಾಜ ಎಮ್.ಯರಗುಪ್ಪಿ.**
ಬಿಆರ್‌ಪಿ, ಶಿರಹಟ್ಟಿ.

---

# ದುರ್ಗುಣಗಳನ್ನು ದಹಿಸುವುದೇ ಕಾಮದಹನ

ಅಸುರೀ ಶಕ್ತಿಗಳ ಮೇಲೆ ದೈವೀ ಗುಣಗಳ ವಿಜಯದ ಸಂಕೇತವಾಗಿ ಪ್ರತಿವರ್ಷ ಹೋಳಿ ಹಬ್ಬ ಆಚರಿಸಲಾಗುತ್ತದೆ. ಹೋಳಿ ಹಬ್ಬದ ದಿನ ಕಟ್ಟಿಗೆ ಮತ್ತು ಕಾಮಣ್ಣ ಮತ್ತು ರತಿದೇವಿಯ ಗೊಂಬೆಯನ್ನು ದಹಿಸುವುದು ಪ್ರಚಲಿತವಾಗಿದೆ. ವಾಸ್ತವಿಕವಾಗಿ ನಮ್ಮಲ್ಲಿರುವ ಸಿಟ್ಟು, ತಿರಸ್ಕಾರ, ಅನೇಕ ಪ್ರಕಾರದ ಹಳೆಯ ಸ್ವಭಾವ, ಸಂಸ್ಕಾರಗಳನ್ನು ದಹಿಸಿದಾಗ ಹೋಳಿಯನ್ನು ಆಚರಿಸಿದಂತೆ.

ಹೋಳಿ ಹಬ್ಬ ಭಾರತ ದೇಶದ ಅನೇಕ ಪ್ರಾಂತಗಳಲ್ಲಿ ಮತ್ತು ದೇಶ-ವಿದೇಶಗಳಲ್ಲಿ ಆಚರಿಸಲಾಗುತ್ತದೆ. ಮಾಘ ಮಾಸದ ಹುಣ್ಣಿಮೆಯ ದಿನ ಹೋಳಿ, ಶಿಮಗ, ಹೋಲಿ ಮತ್ತು ಪಂಚಮಿಯ ದಿನ ಬಣ್ಣದ ಹಬ್ಬ ಓಕುಳಿ ವೈವಿಧ್ಯ, ಬಣ್ಣಗಳಿಂದ ಗುಲಾಲದಿಂದ ಆಟ ಆಡುತ್ತಾರೆ. ನೇಪಾಳಿ, ಪಂಜಾಬಿ ಭಾಷೆಯಲ್ಲಿ 'ಹೋಲಿ' ಅಸ್ಸಾಂನಲ್ಲಿ 'ಭಾಗವತ್', ಒರಿಸ್ಸಾದಲ್ಲಿ ಬಂಗಾಳದಲ್ಲಿ 'ವಸಂತೋತ್ಸವ', ಎಂದು ಹೋಳಿ ಹಬ್ಬ ವಿಶೇಷವಾಗಿರುತ್ತದೆ.

ಕೃಷ್ಣ ಹುಟ್ಟಿದ ಸ್ಥಳದಲ್ಲಿ ಮಥುರಾ ಬೃಂದಾವನದಲ್ಲಿ 16 ದಿನಗಳವರೆಗೆ ಹೋಳಿ ವಿಶೇಷವಾಗಿರುತ್ತದೆ. ಬಾಂಗ್ಲಾದೇಶ್, ಪಾಕಿಸ್ತಾನ, ಸರಿನಾ, ಗಯಾನಾ, ಟ್ರೇನಿಡಾಡ್, ಟೊರೆಂಟೊ, ದಕ್ಷಿಣ ಆಫ್ರಿಕಾ, ಮಲೇಶಿಯಾ, ಅಮೇರಿಕಾಗಳಲ್ಲಿ ಹೋಳಿಯನ್ನು ವಿಜೃಂಭಣೆಯಿಂದ ಆಚರಿಸಲಾಗುತ್ತದೆ. ಹೋಳಿ ಹಬ್ಬವು ಯಾವುದೇ ಜಾತಿ-ಭೇದವಿಲ್ಲದೆ, ಸರ್ವರಲ್ಲಿ ಎಲ್ಲಾ ಮಾನವರಲ್ಲಿ ಜೀವನದ ಸಂತೋಷ-ಸುಖಗಳನ್ನು ಹಂಚುವ ಹಬ್ಬವಾಗಿದೆ.



ಶಿವ ಮತ್ತು ಕಾಮದೇವನ ಬಗ್ಗೆ ಒಂದು ಕಥೆ ಇದ್ದರೆ, ಮತ್ತೊಂದು ಕಥೆ ಶ್ರೀಕೃಷ್ಣ ಮತ್ತು ಪೂತನಿಯ ಬಗ್ಗೆ ಇದೆ. ಪ್ರಹ್ಲಾದ ಮತ್ತು ಹಿರಣ್ಯ ಕಶ್ಯಪು ಬಗ್ಗೆ ಮತ್ತೊಂದು ಕಥೆ ಇದೆ. ಕೃಷ್ಣ ರಾಧೆಯನ್ನು ಪ್ರೀತಿಸುವುದನ್ನು ಚಿತ್ರಿಸಲು ಮುಂದಾಗುತ್ತಾನೆ. ಅಲ್ಲಿನ ಗೋಪಿಯರು ಬಣ್ಣಿಸುತ್ತಾನೆ. ಆ ಸಮಯದಲ್ಲಿ ಗೋಪಿಯರು ಕೃಷ್ಣನಿಗೆ ಕೋಲಗಳಿಂದ ಹೊಡೆಯಲು ಬೆನ್ನಟ್ಟುತ್ತಾರೆ. ಉತ್ತರಪ್ರದೇಶದಲ್ಲಿ ದ್ವಾರಕಾ ಮತ್ತು ಮಥುರದಲ್ಲಿ ಹೋಳಿ ಆಚರಣೆಯ ವೇಳೆ ಈ ಸಂಪ್ರದಾಯವನ್ನು ಪಾಲಿಸಲಾಗುತ್ತದೆ.

ಶೀತ ಋತುವಿನ ಅಂತ್ಯ ಮತ್ತು ವಸಂತ ಋತುವಿನ ಸ್ವಾಗತವು ಆ ದಿನದಿಂದ ಪ್ರಾರಂಭವಾಗುತ್ತದೆ. ಹವಾಮಾನದಲ್ಲಿ ಹಠಾತ್ ಬದಲಾವಣೆಯು ಚರ್ಮವನ್ನು ಕೆಳಿಸುತ್ತದೆ. ಆ ಸಮಯದಲ್ಲಿ ಬಣ್ಣಗಳನ್ನು ಎರಚುವುದರಿಂದ ಕಿರಿಕಿರಿ ಕಡಿಮೆಯಾಗುತ್ತದೆ ಎಂದು ನಂಬಲಾಗಿದೆ.

ಹೋಳಿ ಹಬ್ಬದ ಸಂದರ್ಭದಲ್ಲಿ ಈ ವಿಚಾರಗಳು ಗಮನಕ್ಕಿರಲಿ.

1. ಯಾವುದೇ ಅಪರಿಚಿತ ವ್ಯಕ್ತಿಗಳ ಮೇಲೆ ಅವರ ಅಪ್ಪಣೆ ಇಲ್ಲದೆ ಬಣ್ಣ ಹಾಕುವುದು ಬೇಡ.
2. ರಾಸಾಯನಿಕ ಬಣ್ಣಗಳು, ಆಯಿಲ್ ಪೇಂಟ್ ಇರುವುದು ಅತ್ಯುತ್ತಮ. ಇದರಿಂದ ಶಾರೀರಿಕ ಹಾನಿ ಆಗಬಹುದು.
3. ಸಾಧ್ಯವಾದಷ್ಟು ನೈಸರ್ಗಿಕ ಬಣ್ಣ ಬೀಟ್ರೂಟ್, ಗುಲಾಲ್, ಅರಿಶಿಣ, ಪಾಲಕ್ ಸೊಪ್ಪು, ಮುಂತಾದ ಒಳಬಣ್ಣಗಳನ್ನು ಉಪಯೋಗಿಸಿ. ಏಕೆಂದರೆ ಕರ್ನಾಟಕದಲ್ಲಿ ನೀರಿನ ಬರಗಾಲ ಇದೆ.
4. ಎಸ್‌ಎಸ್‌ಎಲ್‌ಸಿ ಹಾಗೂ ಅನೇಕ ಪರೀಕ್ಷೆಗೆ ಹೋಗುವ ವಿದ್ಯಾರ್ಥಿಗಳಿಗೆ ತೊಂದರೆ ಆಗದೆ ಇರಲಿ. ಹಲಿಗೆ ಬಾರಿಸುವುದು, ಕೂಗುವುದು ಕಡಿಮೆ ಇರಲಿ.
5. ಆವ್ಯಶಕ ಸರಕಾರಿ ಕಾಯಕಗಳಿಗೆ ಹೋಗುವವರಿಗೆ ಬಣ್ಣ ಹಾಕುವುದು ಬೇಡ.

– **ವಿಶ್ವಾಸ ಸೋಹೋನಿ.**
ಬ್ರಹ್ಮಾಕುಮಾರೀಸ್ ಮೀಡಿಯಾ ವಿಂಗ್ಸ್.

---

# ಕೆ.ಎಸ್. ಈಶ್ವರಪ್ಪ ಅಭಿಮಾನಿಗಳ ಸಭೆ

■ ವಿಜಯಸಾಕ್ಷಿ ಸುದ್ದಿ, ಗದಗ

ರಾಜ್ಯದಲ್ಲಿ ಬಿಜೆಪಿಯನ್ನು ಸಂಘಟಿಸಿ ಬಲಿಷ್ಠಗೊಳಿಸಿ, ದಕ್ಷಿಣ ಭಾರತದಲ್ಲಿ ಬಿಜೆಪಿ ಅಧಿಕಾರಕ್ಕೆ ಬರಲು ಅವಿರತವಾಗಿ ಶ್ರಮಿಸಿದ ಮಾಜಿ ಉಪಮುಖ್ಯಮಂತ್ರಿ ಕೆ.ಎಸ್. ಈಶ್ವರಪ್ಪನವರ ಪುತ್ರ ಕಾಂತೇಶ್ ಅವರಿಗೆ ಟಿಕೆಟ್ ನೀಡದೆ ಕೆ.ಎಸ್. ಈಶ್ವರಪ್ಪ ಸ್ವಾಭಿಮಾನಕ್ಕೆ ಧಕ್ಕೆ ತಂದ ಬಿಜೆಪಿಗೆ ಪಾಠ ಕಲಿಸುವಲ್ಲಿ ರಾಜ್ಯಾದ್ಯಂತ ಕುರುಬ ಸಮಾಜ ಅವರ ಬೆಂಬಲಕ್ಕೆ ನಿಲ್ಲಬೇಕೆಂದು ಕೆ.ಎಸ್. ಈಶ್ವರಪ್ಪ ಅಭಿಮಾನಿ ಬಳಗದ ಅರುಣ್ ಅಣ್ಣಿಗೇರಿ ಹೇಳಿದ್ದಾರೆ.

ಈ ಬಗ್ಗೆ ಪತ್ರಿಕಾ ಹೇಳಿಕೆ ನೀಡಿರುವ ಅವರು, ರಾಜ್ಯಾದ್ಯಂತ ಕೆ.ಎಸ್. ಈಶ್ವರಪ್ಪ ಅವರ ಅಭಿಮಾನಿಗಳು ಒಟ್ಟಾಗಿ, ಪಕ್ಷಾತೀತವಾಗಿ ಅವರನ್ನು ಬೆಂಬಲಿಸುವ ಮೂಲಕ ಅವರಿಗೆ ಶಕ್ತಿ ತುಂಬುವ ಉದ್ದೇಶದಿಂದ ಮಾ.24ರಂದು ಬೆಳಿಗ್ಗೆ 11 ಗಂಟೆಗೆ ಗದಗ ನಗರದ ಮೌರ್ಯ ಹೋಟೆಲ್‌ನಲ್ಲಿ ಸಭೆಯನ್ನು ಕರೆಯಲಾಗಿದ್ದು, ಈ ಸಭೆಯ ಸಾನಿಧ್ಯವನ್ನು



ಪೂಜ್ಯ ಬಸವರಾಜದೇವರು ಮನ್ಸೂರ ರೇವಣಸಿದ್ದೇಶ್ವರ ಮಹಾಮಠ ಧಾರವಾಡ, ಹಾಲುಮತ ಗುರುಸ್ವಾಮಿಗಳಾದ ಶ್ರೀ ಶಿವಲಿಂಗಸ್ವಾಮಿಗಳು ವಹಿಸಲಿದ್ದಾರೆ.

ಈ ಸಭೆಯಲ್ಲಿ ಕೆ.ಎಸ್. ಈಶ್ವರಪ್ಪನವರ ಅಭಿಮಾನಿಗಳು ಎಲ್ಲರೂ ಭಾಗವಹಿಸಿ ತಮ್ಮ ಸಲಹೆ ಸೂಚನೆ ನೀಡಿ ಈಶ್ವರಪ್ಪನವರಿಗೆ ರಾಜಕೀಯ ಶಕ್ತಿ ನೀಡುವ ಪಣ ತೊಡಬೇಕು ಎಂದು ಅರುಣ್ ಅಣ್ಣಿಗೇರಿ, ಸುಜಾತಾ ಕಳ್ಳಿಮನಿ, ಮಾಂತೇಶ್ ಅರ್ಗಂಜಿ, ಶಿವಾನಂದ ಮುತ್ತಣ್ಣವರ್ ಮುಂತಾದವರು ತಿಳಿಸಿದ್ದಾರೆ.

---

# ರೇಣುಕಾಚಾರ್ಯರು ಶ್ರೇಷ್ಠ ಸಂತರು

■ ವಿಜಯಸಾಕ್ಷಿ ಸುದ್ದಿ, ಡಂಬಳ

ಜಗತ್ತಿನಾದ್ಯಂತ ಎಲ್ಲಾ ಧರ್ಮಗಳ ದಾರ್ಶನಿಕರು ಹಾಕಿ ಕೊಟ್ಟಿರುವ ವಿಚಾರಗಳು ವಿಶ್ವಕ್ಕೆ ಶಾಂತಿಯನ್ನು ತಂದು ಕೊಡುತ್ತವೆ. ಆ ನಿಟ್ಟಿನಲ್ಲಿ ಉತ್ತಮ ಶಾಂತಿಯುತ ಸಹಬಾಳ್ವೆಯ ಸಮಾಜ ನಿರ್ಮಾಣಕ್ಕೆ ಸಂದೇಶವನ್ನು ರೇಣುಕಾಚಾರ್ಯರು ಸಾರಿದ್ದಾರೆ. ಅವರು ಹಾಕಿಕೊಟ್ಟಿರುವ ಸಂದೇಶಗಳನ್ನು ಪ್ರತಿಯೊಬ್ಬರೂ ಅರ್ಥಮಾಡಿಕೊಂಡು ನಡೆದಾಗ ಮಾತ್ರ ಅವರ ಜಯಂತಿಯ ಆಚರಣೆ ಅರ್ಥಪೂರ್ಣ ಎಂದು ಸಿದ್ದಲಿಂಗಯ್ಯ ಸ್ಥಾವರಮಠ ಹೇಳಿದರು.



ಡಂಬಳ ಗ್ರಾಮದ ಜಂಗಮ ಸೇವಾ ಸಮಿತಿ ವತಿಯಿಂದ ವೀರಭದ್ರೇಶ್ವರ ದೇವಸ್ಥಾನದಲ್ಲಿ ಶುಕ್ರವಾರ ಹಮ್ಮಿಕೊಂಡಿದ್ದ ರೇಣುಕಾಚಾರ್ಯ ಜಯಂತಿ ಕಾರ್ಯಕ್ರಮದಲ್ಲಿ ಮಾತನಾಡಿದ ಅವರು, ರೇಣುಕಾಚಾರ್ಯರು ಶ್ರೇಷ್ಠ ಸಂತರು ಹಾಗೂ ಪವಾಡ ಪುರುಷರಾಗಿದ್ದರು ಎಂದರು.

ಮಂಜಯ್ಯಸ್ವಾಮಿ ಅರವಟಗಿಮಠ, ಕುಮಾರಸ್ವಾಮಿ ಹೆಬ್ಬಳ್ಳಿಮಠ ಮಾತನಾಡಿ, ಮಾನವನ ದಾನದ ಗುಣಗಳನ್ನು ದಹಿಸಿ ಆತನನ್ನು ಮಹಾದೇವನನ್ನಾಗಿಸುವ ಅಪೂರ್ವ ಸಿದ್ಧಾಂತವನ್ನು ಜಗದ್ಗುರು ರೇಣುಕಾಚಾರ್ಯರು ನೀಡಿದರು.

ಜೀವಿ ಶಿವನಾಗುವ ಅಂಗ ಲಿಂಗವಾಗುವ ಅದ್ಭುತ ಸಿದ್ಧಾಂತವನ್ನು ಜಗತ್ತಿಗೆ ಬೋಧಿಸಿ ಬೆಳಕಾಗಿದ್ದಾಗರೆ ಎಂದರು.

ಚೆನ್ನವೀರಯ್ಯ ಹೆಬ್ಬಳಿಮಠ, ಬಸಯ್ಯ ಹಡಗಲಿಮಠ, ಸಿದ್ದು ಹಿರೇಮಠ, ಸಿದ್ಧಲಿಂಗಯ್ಯ ಕಾಡಸಿದ್ದೇಶ್ವರಮಠ, ವೀರಯ್ಯ ನರೇಗಲ್ಲಮಠ, ರೇವಣಸಿದ್ಧಯ್ಯ ಹಿರೇಮಠ, ವೀರಣ್ಣ ಕರವೀರಮಠ, ಅಶೋಕ ಹಡಗಲಿಮಠ, ಮಲ್ಲಯ್ಯ ಅರವಟಗಿಮಠ, ಶಿವರುದ್ರಯ್ಯ ಗಂಧದ, ರೇವಣಸಿದ್ದಯ್ಯ ಹಿರೇಮಠ, ಬಸಯ್ಯ ಹಿರೇಮಠ, ಚೆನ್ನಯ್ಯ ಕಾಡಸಿದ್ದೇಶ್ವರಮಠ, ಫಕ್ಕಿರಯ್ಯ ಅರವಟಗಿಮಠ, ವಿರಣ್ಣ ಕರವೀರಮಠ, ನಾಗಯ್ಯ ಕರವೀರಮಠ, ಅಪ್ಪಯ್ಯ ಹಿರೇಮಠ, ಹಾಲಯ್ಯ ಹಿರೇಮಠ, ಶರಣಯ್ಯ ಸಾರಂಗಮಠ, ವೀರಯ್ಯ ಕಾಡಸಿದ್ದೇಶ್ವರಮಠ ಮಹಿಳೆಯರು ಯುವಕರು ಇದ್ದರು.

---

# ಸೂಕ್ತ ದಾಖಲೆಯಿಲ್ಲದ ಬಂಗಾರದ ಆಭರಣ ಸೀಜ್




■ ವಿಜಯಸಾಕ್ಷಿ ಸುದ್ದಿ, ಧಾರವಾಡ

ಧಾರವಾಡ ಲೋಕಸಭೆ ಸಾರ್ವತ್ರಿಕ ಚುನಾವಣೆ ಹಿನ್ನೆಲೆಯಲ್ಲಿ ಸ್ಥಾಪಿಸಿರುವ ತೇಗೂರ ಚೆಕ್ ಪೋಸ್ಟ್‌ದಲ್ಲಿ ಗುರುವಾರ ರಾತ್ರಿ ತಪಾಸಣೆಯಲ್ಲಿ ಕೆ.ಎಸ್.ಆರ್.ಟಿ.ಸಿಯ ನಿಪ್ಪಾಣಿ  ಗಂಗಾವತಿ ಬಸ್‌ದಲ್ಲಿ ಸರಿಯಾದ ದಾಖಲೆ ಇಲ್ಲದ ರೂ. 38,50,000 ಮೊತ್ತದ ಬಂಗಾರದ ಆಭರಣಗಳು ಪತ್ತೆಯಾಗಿದ್ದು, ವಸ್ತು ವಶಪಡಿಸಿಕೊಂಡು ಎಫ್‌ಐಆರ್ ದಾಖಲಿಸಲಾಗಿದೆ ಎಂದು ಜಿಲ್ಲಾ ಚುನಾವಣಾಧಿಕಾರಿಗಳು ತಿಳಿಸಿದ್ದಾರೆ.

ಈ ಕುರಿತು ಪ್ರಕಟಣೆ ನೀಡಿರುವ ಅವರು ಮಾರ್ಚ್ 21ರಂದು ರಾತ್ರಿ 11-35 ಗಂಟೆಗೆ ತೇಗೂರ ಚೆಕ್ ಪೋಸ್ಟ್‌ನಲ್ಲಿ ಕೆ.ಎಸ್.ಆರ್.ಟಿ.ಸಿ ಬಸ್ ನಂ. ಕೆಎ-37-ಎಫ್-0748 (ನಿಪ್ಪಾಣಿ-ಗಂಗಾವತಿ) ನೇದ್ದರಲ್ಲಿ ಆರೋಪಿ ಮಹಾರಾಷ್ಟ್ರ ಕೊಲ್ಲಾಪುರದ ಪ್ರಕಾಶಕುಮಾರ (47) ಹುಕುಮಜಿ ಮಾಲಿ ಇವರು ಒಟ್ಟು 778 ಗ್ರಾಂ ತೂಕದ ಬೋರಮಾಳ ಸರ, ಗುಂಡುಗಳು, ಲಾಕೆಟ್ ಇರುವ 38,50,000 ರೂ ಬೆಲೆಬಾಳುವ ಬಂಗಾರದ ಆಭರಣಗಳನ್ನು ತೆಗೆದುಕೊಂಡು ಕೊಲ್ಲಾಪುರದಿಂದ ಸಿಂಧನೂರ ಕಡೆಗೆ ಹೋಗುತ್ತಿದ್ದು, ಸದರಿಯವರು ತೋರಿಸಿದ ಬಿಲ್‌ಗಳಲ್ಲಿ ಇರುವ ಬಂಗಾರದ ಆಭರಣಗಳ ತೂಕಕ್ಕೂ ಹಾಗೂ ತಪಾಸಣೆಯಲ್ಲಿ ಸಿಕ್ಕ ಬಂಗಾರದ ಆಭರಣಗಳ ತೂಕಕ್ಕೂ ವ್ಯತ್ಯಾಸ ಇದ್ದು, ಸರಿಯಾದ ಮಾಹಿತಿಯನ್ನು ಬಿಲ್ಲುಗಳಲ್ಲಿ ನಮೂದಿಸದೇ ಮರೆಮಾಚಿ ಯಾವುದೋ ಅಪರಾಧ ಕೃತ್ಯ ಎಸಗುವ ಸಲುವಾಗಿ ತೆಗೆದುಕೊಂಡು ಹೊರಟಿರುವ ಸಂಶಯದ ಮೇಲೆ ಕಲಂ 98 ಕೆ.ಪಿ ಕಾಯ್ದೆ ಅಡಿಯಲ್ಲಿ ಗರಗ ಪೊಲೀಸ್ ಠಾಣೆಯಲ್ಲಿ ಎಫ್‌ಐಆರ್ ದಾಖಲಿಸಿ ಕ್ರಮ ಕೈಗೊಳ್ಳಲಾಗಿದೆ ಎಂದು ಜಿಲ್ಲಾ ಚುನಾವಣಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

---

# ಭರತನಾಟ್ಯ ಸ್ಪರ್ಧೆಯಲ್ಲಿ ಪ್ರಶಸ್ತಿ



■ ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಇತ್ತೀಚೆಗೆ ದಕ್ಷಿಣ ಕನ್ನಡ ಜಿಲ್ಲೆಯ ಪುತ್ತೂರಿನ ಅರ್ಜುನ್ ಸ್ಪೋರ್ಟ್ಸ್ ಕ್ಲಬ್ ಹಾಗೂ ಕೃಷ್ಣ ಯುವಕ ಮಂಡಲ ಇವರ ವತಿಯಿಂದ ಶಕುಂತಲಾ ಟಿ.ಶೆಟ್ಟಿ ಇವರ ಜನ್ಮದಿನದ ಪ್ರಯುಕ್ತ ಹಮ್ಮಿಕೊಂಡಿದ್ದ ಆನ್‌ಲೈನ್ ಭರತನಾಟ್ಯ ಸ್ಪರ್ಧೆಯಲ್ಲಿ ಪಟ್ಟಣದ ತೇಜೋಮಯಿ ಗದ್ದಿ ತೃತೀಯ ಪ್ರಶಸ್ತಿ ಪಡೆದಿದ್ದಾಳೆ.

ಈ ಭರತನಾಟ್ಯ ಸ್ಪರ್ಧೆಯಲ್ಲಿ ಸುಮಾರು 87 ಸ್ಪರ್ಧಿಗಳು ಬಾಗವಹಿಸಿದ್ದರು. ಅದರಲ್ಲಿ ತೇಜೋಮಯಿ ಗದ್ದಿ ತೃತೀಯ ಬಹುಮಾನ ಪಡೆಯುವ ಮೂಲಕ ಸಾಧನೆ ಮಾಡಿದ್ದಾಳೆ. ವಿದ್ಯಾರ್ಥಿನಿಯ ಸಾಧನೆಗೆ ಎಲ್ಲೆಡೆ ಮೆಚ್ಚುಗೆ ವ್ಯಕ್ತವಾಗಿದೆ.

---

### ಜಯ ಕರ್ನಾಟಕ ಸಂಘಟನೆಯಿಂದ ಸಾಧಕ ವಿದ್ಯಾರ್ಥಿಗಳಿಗೆ ಸನ್ಮಾನ

# ವಿದ್ಯಾಭ್ಯಾಸದೊಂದಿಗೆ ಕ್ರೀಡೆಯಲ್ಲಿಯೂ ತೊಡಗಿಸಿ

■ ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಮಾರ್ಚ್ ತಿಂಗಳ ಆರಂಭದಲ್ಲಿ ಥೈಲ್ಯಾಂಡ್‌ನ ಪುಕೆಟ್ ನಗರದಲ್ಲಿ ನಡೆದ 6ನೇ ಅಂತಾರಾಷ್ಟ್ರೀಯ ಮಟ್ಟದ ಸ್ಕ್ವಾಯ್ ಮಾರ್ಷಲ್ ಆರ್ಟ್ಸ್ ಕ್ರೀಡೆಯಲ್ಲಿ ಪಟ್ಟಣದ ವಿದ್ಯಾರ್ಥಿಗಳು ದೇಶವನ್ನು ಪ್ರತಿನಿಧಿಸುವ ಮೂಲಕ ಉತ್ತಮ ಸಾಧನೆ ಮಾಡಿ, ದೇಶಕ್ಕೆ ಕೀರ್ತಿ ತಂದಿರುವ ಹಿನ್ನೆಲೆಯಲ್ಲಿ ಪಟ್ಟಣದಲ್ಲಿ ಜಯ ಕರ್ನಾಟಕ ಸಂಘಟನೆಯ ವತಿಯಿಂದ ಸಾಧಕ ವಿದ್ಯಾರ್ಥಿಗಳು ಹಾಗೂ ತರಬೇತಿದಾರ ಸೈಯದ್ ರಫೀಕ್ ಪೀರಜಾದೆ ಅವರನ್ನು ಗೌರವಿಸಲಾಯಿತು.

ಈ ಸಂದರ್ಭದಲ್ಲಿ ಮಾತನಾಡಿದ ಜಯ ಕರ್ನಾಟಕ ಸಂಘಟನೆಯ ರಾಜ್ಯ ಪ್ರಧಾನ ಕಾರ್ಯದರ್ಶಿ ಚಂದ್ರಕಾಂತ ಚವಾಣ್ ಮತ್ತು ತಾಲೂಕಾಧ್ಯಕ್ಷ ಇಸ್ಮಾಯಿಲ್ ಆಡೂರ ಮಾತನಾಡಿ, ಲಕ್ಷ್ಮೇಶ್ವರದ ಮಕ್ಕಳು ದೇಶವನ್ನು



ಸ್ಕ್ವಾಯ್ ಮಾರ್ಷಲ್ ಆರ್ಟ್ ತರಬೇತುದಾರ ಸಯ್ಯದ ರಫೀಕ್ ಪೀರಜಾದೆ ಚಿನ್ನದ ಪದಕ ಪಡೆದ ಮಾನ್ಯತಾ ಕೋಟಿಮಠ, ಮನೋಜ್ಞ ಕೋಟಿಮಠ, ಅಯಾನ್ ಮಿರ್ಜಾ, ಸುಹಾನ್ ಮಿರ್ಜಾ, ಬೆಳ್ಳಿಯ ಪದಕ ಪಡೆದ ಮೋಹನ್ ಪತ್ತಾರ ಹಾಗೂ ರಾಷ್ಟ್ರ ಮಟ್ಟದಲ್ಲಿ ಸಾಧನೆ ಮಾಡಿದ ಅನಮ್ ಸೂರಣಗಿ ಅವರನ್ನು ಸನ್ಮಾನಿಸಲಾಯಿತು.

ಪ್ರತಿನಿಧಿಸಿ ಅಂತಾರಾಷ್ಟ್ರೀಯ ಮಟ್ಟದ ಸ್ಕ್ವಾಯ್ ಮಾರ್ಷಲ್ ಆರ್ಟ್ಸ್‌ನಲ್ಲಿ ಭಾಗವಹಿಸಿರುವದು ಹೆಮ್ಮೆಯ ಸಂಗತಿಯಾಗಿದೆ. ಸಣ್ಣ ವಯಸ್ಸಿನಲ್ಲಿ ಸಾಧನೆ ಮಾಡಿದ ಇವರು ಯುವ ಪೀಳಿಗೆಗೆ ಸ್ಫೂರ್ತಿಯಾಗಿದ್ದಾರೆ. ಭಾಗವಹಿಸಿದ್ದ 8 ಮಕ್ಕಳಲ್ಲಿ ಐವರು ಬಂಗಾರ, ಒಂದು ಬೆಳ್ಳಿ ಪದಕದೊಂದಿಗೆ ಉತ್ತಮ ಸಾಧನೆ ಮಾಡಿ ಗಮನ ಸೆಳೆದಿರುವದು ಹೆಮ್ಮೆಯ ಸಂಗತಿ.

ಇಂತಹ ಸಾಧನೆಗಳನ್ನು ಪ್ರೋತ್ಸಾಹಿಸುವ ಕಾರ್ಯವಾಗಬೇಕು. ಪಾಲಕರು ಮಕ್ಕಳಿಗೆ ವಿದ್ಯಾಭ್ಯಾಸದೊಂದಿಗೆ ಇಂತಹ ಕ್ರೀಡೆಗಳಲ್ಲಿ ಬಾಗವಹಿಸಲು ಪ್ರೋತ್ಸಾಹ ನೀಡುವ ಮೂಲಕ ಅವರ ಪ್ರತಿಭೆಗೆ ನೀರೆರೆಯಬೇಕು ಎಂದು ಮನವಿ ಮಾಡಿದರು.

ಅತಿಥಿಗಳಾಗಿ ಆಗಮಿಸಿ ಕರವೇ ಜಿಲ್ಲಾಧ್ಯಕ್ಷ ಶರಣು ಗೋಡಿ, ಇಸಾಕ್‌ಭಾಷಾ ಹರಪನಹಳ್ಳಿ, ಮಹಮದಗೌಸ್ ಹುಲಗೂರ, ನಾಗರಾಜ ಕ್ಷತ್ರಿಯ, ಶರಣಪ್ಪ ಕೆರೆಕೊಪ್ಪದ, ಬಸವಣೆಪ್ಪ ಮೂಕಿ, ಮಂಜುನಾಥ ಶಿರಹಟ್ಟಿ, ಅಬ್ದುಲಖಾದರ ಕೊಪ್ಪಳ, ಹಾಲಪ್ಪ ಬಂಡಾರಿ, ಯಲ್ಲಪ್ಪ ಹಂಜಗಿ, ಹಜರತಪಟೇಲ್ ಬಸಣ್ಣ ಮೇಲ್ಮುರಿ ಸೇರಿದಂತೆ ಅನೇಕರಿದ್ದರು.

## ಪ್ರತಿಯೊಬ್ಬರನ್ನೂ ಸಮಾನವಾಗಿ ಕಾಣಿ



■ವಿಜಯಸಾಕ್ಷಿ ಸುದ್ದಿ, ಧಾರವಾಡ

ಜಿಲ್ಲಾಡಳಿತ ಹಾಗೂ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಹಯೋಗದಲ್ಲಿ ಶನಿವಾರ ಬೆಳಿಗ್ಗೆ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಶ್ರೀ ರೇಣುಕಾಚಾರ್ಯ ಜಯಂತಿಯನ್ನು ಆಚರಿಸಲಾಯಿತು.

ಜಿಲ್ಲಾಧಿಕಾರಿ ದಿವ್ಯ ಪ್ರಭು ಅವರು ಶ್ರೀ ರೇಣುಕಾಚಾರ್ಯ ಭಾವಚಿತ್ರಕ್ಕೆ ಪೂಜೆಯೊಂದಿಗೆ ಪುಷ್ಪಾರ್ಪಣೆ ಸಲ್ಲಿಸಿ, ನಮಿಸಿದರು. ಈ ಸಂದರ್ಭದಲ್ಲಿ ಮಾತನಾಡಿದ ಅವರು, ಸಮಾಜದ ಒಳಿತಿಗಾಗಿ ಜಾತಿ, ಧರ್ಮ, ಮತ ಮತ್ತು ಯಾವುದೇ ಪ್ರಕಾರದ ಮೇಲು-ಕೀಳು ಎನ್ನದೆ ಸಮಾಜದಲ್ಲಿ ಪ್ರತಿಯೊಬ್ಬರನ್ನೂ ಸಮಾನವಾಗಿ ಕಾಣಬೇಕು. ಮಹಾತ್ಮರ ಬದುಕು ನಮಗೆ ಜೀವನ ಮಾರ್ಗ ತೋರುತ್ತದೆ ಎಂದರು.

ಲೋಕಸಭಾ ಚುನಾವಣೆ ಹಿನ್ನೆಲೆಯಲ್ಲಿ ಸರಳವಾಗಿ ಆಚರಿಸಿದ ಈ ಜಯಂತಿ ಕಾರ್ಯಕ್ರಮದಲ್ಲಿ ಹಿರಿಯರಾದ ಸರೋಜಾ ಪಾಟೀಲ, ಬಂಗಾರೇಶ ಹಿರೇಮಠ ಹಾಗೂ ಇತರರು ಮಾತನಾಡಿದರು. ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕ ಕುಮಾರ ಬೆಕ್ಕೇರಿ ಕಾರ್ಯಕ್ರಮ ನಿರೂಪಿಸಿ, ವಂದಿಸಿದರು. ಕಾರ್ಯಕ್ರಮದಲ್ಲಿ ಗಣ್ಯರು, ಹಿರಿಯ ನಾಗರಿಕರು, ಸಾರ್ವಜನಿಕರು ಉಪಸ್ಥಿತರಿದ್ದರು.

### ಜಿಲ್ಲೆಯ 101 ಪರೀಕ್ಷಾ ಕೇಂದ್ರಗಳಲ್ಲಿ ಪರೀಕ್ಷೆ ಬರೆಯಲಿರುವ 29,929 ವಿದ್ಯಾರ್ಥಿಗಳು

# ಪರೀಕ್ಷಾ ಕೊಠಡಿಗೆ ಸಿಸಿ ಟಿವಿ ಕಣ್ಗಾವಲು

■ವಿಜಯಸಾಕ್ಷಿ ಸುದ್ದಿ, ಧಾರವಾಡ

ಮಾರ್ಚ್ 25ರಿಂದ ಏಪ್ರಿಲ್ 6ರವರೆಗೆ ಎಸ್‌ಎಸ್‌ಎಲ್‌ಸಿ ಪರೀಕ್ಷೆಗಳು ಜರುಗಲಿದ್ದು, 29,929 ವಿದ್ಯಾರ್ಥಿಗಳು ಜಿಲ್ಲೆಯ 101 ಪರೀಕ್ಷಾ ಕೇಂದ್ರಗಳಲ್ಲಿ ಪರೀಕ್ಷೆ ಬರೆಯಲಿದ್ದಾರೆ. ಈ ಕುರಿತು ಪ್ರಕಟಣೆ ನೀಡಿರುವ ಶಾಲಾ ಶಿಕ್ಷಣ ಇಲಾಖೆಯ ಉಪ ನಿರ್ದೇಶಕ ಎಸ್.ಎಸ್. ಕೆಳದಿಮಠ, ಜಿಲ್ಲೆಯಲ್ಲಿ ಎಸ್‌ಎಸ್‌ಎಲ್‌ಸಿ ಪರೀಕ್ಷೆಗಳನ್ನು ಸುಸೂತ್ರವಾಗಿ ನಡಸಲು ಜಿಲ್ಲಾಧಿಕಾರಿಗಳ ಮತ್ತು ಜಿಲ್ಲಾ ಪಂಚಾಯತ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳ ಮಾರ್ಗದರ್ಶನದಲ್ಲಿ ಅಗತ್ಯವಿರುವ ಸಿದ್ಧತೆಗಳನ್ನು ಮಾಡಿಕೊಳ್ಳಲಾಗಿದೆ ಎಂದು ತಿಳಿಸಿದ್ದಾರೆ.

ಜಿಲ್ಲಾ ಹಂತದಲ್ಲಿ ಜಿಲ್ಲಾ ಪಂಚಾಯತ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳ ನಿರ್ದೇಶನದ ಮೇರೆಗೆ ಪ್ರತಿಯೊಂದು ತಾಲೂಕಿನ ಪರೀಕ್ಷಾ ಕೇಂದ್ರಗಳ ಪರೀಕ್ಷಾ ಕಾರ್ಯಗಳ ವೀಕ್ಷಣೆಗಾಗಿ ಉಪನಿರ್ದೇಶಕರ ಕಚೇರಿ ಹಾಗೂ ಶಾಲಾ ಶಿಕ್ಷಣ ಇಲಾಖೆ ಕಚೇರಿಯಲ್ಲಿ ವೆಬ್ ಕಾಸ್ಟಿಂಗ್ ವ್ಯವಸ್ಥೆ ಮಾಡಲಾಗಿದೆ. ಗ್ರೂಪ್ ಬಿ ವೃಂದದ ಅಧಿಕಾರಿಗಳನ್ನು ಸ್ಥಾನಿಕ ಜಾಗೃತದಳದ ಅಧಿಕಾರಿಗಳನ್ನಾಗಿ ಜಿಲ್ಲಾಧಿಕಾರಿಗಳು ನೇಮಕ ಮಾಡಿ ಆದೇಶಿಸಿದ್ದಾರೆ ಎಂದು ಅವರು ತಿಳಿಸಿದ್ದಾರೆ.



ಪರೀಕ್ಷಾ ದಿನದಂದು ಜಿಲ್ಲಾಧಿಕಾರಿಗಳು ಹಾಗೂ ಹುಬ್ಬಳ್ಳಿ-ಧಾರವಾಡ ಮಹಾನಗರದ ಪೊಲೀಸ್ ಆಯುಕ್ತರು ಸಿಆರ್.ಪಿಸಿ. ಸೆಕ್ಷನ್ 144 ಕಲಂನ್ನು ಜಾರಿಗೊಳಿಸಿ ಧಾರವಾಡ ಗ್ರಾಮೀಣ ಜಿಲ್ಲೆ ಹಾಗೂ ಮಹಾನಗರದ ಪರೀಕ್ಷಾ ಕೇಂದ್ರದಗಳ ಸುತ್ತ 200 ಮೀ ಅಂತರದಲ್ಲಿನ ಝುರಾಕ್ಸ್ ಅಂಗಡಿಗಳನ್ನು ಮುಚ್ಚಲು ಆದೇಶಿಸಿದ್ದಾರೆ.

ಜಿಲ್ಲಾ ಆರೋಗ್ಯ ಇಲಾಖೆ ಪರೀಕ್ಷಾ ದಿನದಂದು ಪ್ರತಿ ಪರೀಕ್ಷಾ ಕೇಂದ್ರಗಳಿಗೆ ದಾದಿಯರನ್ನು ನೇಮಕಾತಿ ಮಾಡಿದೆ. ಜಿಲ್ಲೆಯ ಹೆಸ್ಕಾಂಗೆ ಪರೀಕ್ಷಾ ದಿನದಂದು ವಿದ್ಯುತ್ ನಿಲುಗಡೆಯಾಗದಂತೆ ಮುಂಜಾಗ್ರತೆ ವಹಿಸಲು ಜಿಲ್ಲಾಧಿಕಾರಿಗಳು ಸೂಚಿಸಿದ್ದಾರೆ.

ಜಿಲ್ಲಾ ಜಾಗೃತದಳದ 3 ತಂಡಗಳನ್ನು ನೇಮಕ ಮಾಡಲಾಗಿದೆ. ಎಲ್ಲಾ ಪರೀಕ್ಷಾ ಕೇಂದ್ರಗಳಲ್ಲಿ ಮಧ್ಯಾಹ್ನ ಉಪಹಾರ ಯೋಜನೆ ಅಡಿಯಲ್ಲಿ ಪರೀಕ್ಷೆಗೆ ಹಾಜರಾಗುವ ಮಕ್ಕಳಿಗೆ ಬಿಸಿಯೂಟದ ವ್ಯವಸ್ಥೆಯನ್ನು ಮಾಡಲಾಗಿದೆ.

ಹೋಳಿ ಹಬ್ಬದ ನಿಮಿತ್ತ ಹುಬ್ಬಳ್ಳಿಯ ಕೆಲವೊಂದು ಪ್ರದೇಶಗಳಲ್ಲಿ ಪರೀಕ್ಷಾ ದಿನಗಳಂದು ಬಣ್ಣದ ಹಬ್ಬ ಇರುವದರಿಂದ ಪರೀಕ್ಷಾ ಕೇಂದ್ರಗಳಿಗೆ ಪ್ರಯಾಣಿಸುವ ಮಕ್ಕಳಿಗೆ ತೊಂದರೆಯಾಗದಂತೆ ಕ್ರಮ ವಹಿಸಲು ಸಂಬಂಧಿಸಿದ ಕ್ಷೇತ್ರ ಶಿಕ್ಷಣಾಧಿಕಾರಿಗಳಿಗೆ ಸೂಚಿಸಲಾಗಿದೆ.

**ಪರೀಕ್ಷಾ ಕೇಂದ್ರಗಳ ವಿವರ**

ಧಾರವಾಡ ಶಹರದ 34, ಧಾರವಾಡ ಶಹರದ 16, ಧಾರವಾಡ ಗ್ರಾಮೀಣದ 14, ಹುಬ್ಬಳ್ಳಿ ಗ್ರಾಮೀಣದ 13, ಕಲಘಟಗಿಯ 8, ಕುಂದಗೋಳದ 7, ನವಲಗುಂದದ 9 ಪರೀಕ್ಷಾ ಕೇಂದ್ರಗಳು ಸೇರಿ ಒಟ್ಟು ಜಿಲ್ಲೆಯಾದ್ಯಂತ 101 ಪರೀಕ್ಷಾ ಕೇಂದ್ರಗಳನ್ನು ತೆರೆಯಲಾಗಿದೆ.

ಪ್ರತಿಯೊಂದು ಪರೀಕ್ಷಾ ಕೇಂದ್ರದಲ್ಲಿ ಪ್ರತಿ ಕೊಠಡಿಗಳಿಗೆ ಸಿ.ಸಿ. ಕ್ಯಾಮೆರಾಗಳನ್ನು ಅಳವಡಿಸುವಂತೆ ಸೂಚಿಸಲಾಗಿದೆ. ಪರೀಕ್ಷಾ ಕೇಂದ್ರದಲ್ಲಿ ಪರೀಕ್ಷಾ ಕಾರ್ಯಗಳ ವೀಕ್ಷಣೆಗಾಗಿ ಕ್ಷೇತ್ರ ಶಿಕ್ಷಣಾಧಿಕಾರಿಗಳ ಕಚೇರಿಯಲ್ಲಿ ವೆಬ್ ಕಾಸ್ಟಿಂಗ್ ವ್ಯವಸ್ಥೆ ಮಾಡಲಾಗಿದೆ.

ಗ್ರಾಮೀಣ ಪ್ರದೇಶ ಮತ್ತು ಇತರೆ ಪ್ರದೇಶಗಳಿಂದ ಪರೀಕ್ಷಾ ಕೇಂದ್ರಗಳಿಗೆ ಪ್ರಯಾಣಿಸುವ ಮಕ್ಕಳು ಪ್ರವೇಶ ಪತ್ರವನ್ನು ತೋರಿಸಿ ಉಚಿತ ಪ್ರಯಾಣ ಮಾಡಲು ಹುಬ್ಬಳ್ಳಿಯ ವಾ.ಕ.ರಾ.ರ. ಸಂಸ್ಥೆ ಅವಕಾಶ ನೀಡಿದೆ ಎಂದು ಶಾಲಾ ಶಿಕ್ಷಣ ಇಲಾಖೆಯ ಉಪನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಭಗತಸಿಂಗ್ ಅಭಿಮಾನಿ ಬಳಗದಿಂದ ಹುತಾತ್ಮರ ದಿನ ಆಚರಣೆ



■ವಿಜಯಸಾಕ್ಷಿ ಸುದ್ದಿ, ಗದಗ

ಸ್ವಾತಂತ್ರ್ಯಕ್ಕಾಗಿ ತಮ್ಮ ಜೀವನವನ್ನು ಬಲಿದಾನ ಮಾಡಿದ ಭಗತಸಿಂಗ್, ರಾಜಗುರು, ಸುಖದೇವ ಅವರ 94ನೇ ಹುತಾತ್ಮರ ದಿನವಾದ ಇಂದು ನಗರದ ಭಗತ್‌ಸಿಂಗ ಸರ್ಕಲ್‌ನಲ್ಲಿ ಅವರ ಭಾವಚಿತ್ರಕ್ಕೆ ಪುಷ್ಪಾರ್ಪಣೆ ಮಾಡಿ ಗೌರವ ನಮನ ಸಲ್ಲಿಸಲಾಯಿತು.

ಈ ಸಂದರ್ಭದಲ್ಲಿ ಭಗತ್‌ಸಿಂಗ್ ಅಭಿಮಾನಿ ಬಳಗದ ರವಿ ಹುಡೇದ, ಮಂಜುನಾಥ ಮುಳಗುಂದ, ದೀಪಕ, ಅನಿಲ, ಲಿಂಗರಾಜ, ಪ್ರಕಾಶ, ಸುನೀಲ, ಅಭಿಷೇಕ, ಕಾರ್ತಿಕ, ಶ್ರೀಧರ, ಮಹೇಶ, ಮಂಜುನಾಥ, ಗಿರೀಶ, ಮಹಾಂತೇಶ, ಪ್ರಸನ್ನ, ಪಂಕಜ, ವಿನಾಯಕ ಮುಂತಾದವರು ಉಪಸ್ಥಿತರಿದ್ದರು.

# ಇನ್ನರ್‌ವ್ಹೀಲ್ ಕ್ಲಬ್‌ನಲ್ಲಿ ಮಹಿಳಾ ದಿನಾಚರಣೆ

■ವಿಜಯಸಾಕ್ಷಿ ಸುದ್ದಿ, ಗದಗ

ಬಂಜೆತನಕ್ಕೆ ಸ್ತ್ರೀಯರ ತೊಂದರೆಗಳು ಮಾತ್ರವೇ ಕಾರಣವಲ್ಲ, ಪುರಷರಲ್ಲಿಯೂ ತೊಂದರೆಗಳಿರಬಹುದು ಎಂದು ಸ್ತ್ರೀರೋಗ ತಜ್ಞೆ ಡಾ. ಅನುಪಮಾ ಪಾಟೀಲ ಅಭಿಪ್ರಾಯಪಟ್ಟರು.

ಇನ್ನರ್‌ವ್ಹೀಲ್ ಕ್ಲಬ್ ಗದಗ-ಬೆಟಗೇರಿ ಹಮ್ಮಿಕೊಂಡಿದ್ದ ಅಂತಾರಾಷ್ಟ್ರೀಯ ಮಹಿಳಾ ದಿನಾಚರಣೆಯ ಕಾರ್ಯಕ್ರಮದಲ್ಲಿ ಪಾಲ್ಗೊಂಡು ಅವರು ಮಾತನಾಡಿದರು.

ಮಹಿಳೆಯಲ್ಲಿ ಬಂಜೆತನಕ್ಕೆ ನಾನಾ ಕಾರಣಗಳಿರಬಹುದು. ಅದನ್ನು ಪರೀಕ್ಷಿಸಿ ಸೂಕ್ತ ಚಿಕಿತ್ಸೆ ನೀಡಬಹುದು. ಈಗಿನ ಕಾಲದಲ್ಲಿ ಮಹಿಳೆಯರು ಶಿಕ್ಷಣ ಹಾಗೂ




ಇತರ ಜವಾಬ್ದಾರಿಯಿಂದ ತಡವಾಗಿ ಮದುವೆ ಆಗುವುದರಿಂದಲೂ ಗರ್ಭ ನಿಲ್ಲುವುದಕ್ಕೆ ತೊಂದರೆಯಾಗಬಹುದು ಎಂದರು.

ಇನ್ನವ್ಹೀಲ್ ಕ್ಲಬ್ ಅಧ್ಯಕ್ಷೆ ರಜನಿ ಪಾಟೀಲ ಅಂತಾರಾಷ್ಟ್ರೀಯ ಮಹಿಳಾ ದಿನಾಚರಣೆಗೆ ಶುಭಾಶಯದೊಂದಿಗೆ ಎಲ್ಲರನ್ನೂ ಸ್ವಾಗತಿಸಿದರು.

ಕಳೆದ ಎರಡು ವರ್ಷಗಳಲ್ಲಿ 200 ಮಹಿಳೆಯರ ಮಡಿಲು ತುಂಬಿದ ಡಾ. ಅನುಪಮಾ ಪಾಟೀಲರನ್ನು ಸನ್ಮಾನಿಸಲಾಯಿತು.

ಇನ್ನರ್‌ವ್ಹೀಲ್ ಸದಸ್ಯೆ ಪದ್ಮಾ ಕಬಾಡಿ, ಬಾಲ ಪ್ರತಿಭೆ ಹರ್ಷಿತಾ ಪುಂಗಲಿಯಾ, ವೈಷ್ಣವಿ ಇಮ್ಮತಿಯವರಿಗೆ ಶುಭ ಹಾರೈಸಿ ಸನ್ಮಾನಿಸಲಾಯಿತು.


ಇನ್ನೋರ್ವ ಇನ್ನರವ್ಹೀಲ್ ಮಾಜಿ ಸದಸ್ಯೆ ಡಾ. ಶಾಂತಾಬಾಯಿ ಭೂಮರಡ್ಡಿಯವರನ್ನು ಅವರ ನಿವಾಸದಲ್ಲಿ ಸನ್ಮಾನಿಸಲಾಯಿತು. ಮಾಜಿ ಅಧ್ಯಕ್ಷರಾದ ಮೀನಾಕ್ಷಿ ಸಜ್ಜನರ ಕಾಲರ್ ಧಾರಣೆ ಮಾಡಿದರು. ಪ್ರಾಂಭದಲ್ಲಿ ಜ್ಯೋತಿ ಭರಮಗೌಡರ ಪ್ರಾರ್ಥನೆ ಹೇಳಿದರು. ಅತಿಥಿಗಳ ಪರಿಚಯವನ್ನು ಜ್ಯೋತಿ ಭರಮಗೌಡರ, ನಂದಾ ಬಾಳೆಹಳ್ಳಿಮಠ, ರೇಣುಕಾ ಅಮಾತ್ಯ, ಸುಮಾ ಪಾಟೀಲ ಮಾಡಿದರು. ಲಕ್ಕಿ ಲೇಡಿ ರಜನಿ ಪಾಟೀಲ, ವಿದ್ಯಾ ಶಿವನಗುತ್ತಿ, ಕಾರ್ಯದರ್ಶಿ ಹೇಮಲತಾ ಪುಂಗಾಲಿಯಾ ಕಾರ್ಯಕ್ರಮ ನಿರೂಪಿಸಿ ವಂದಿಸಿದರು.

### ಜಗಳೂರು ವಿಧಾನಸಭಾ ವ್ಯಾಪ್ತಿಯ 7 ಗ್ರಾ.ಪಂಗಳಲ್ಲಿ ಹೆಚ್ಚಿದ ನೀರಿನ ಸಮಸ್ಯೆ


# ಬತ್ತಿದ ತುಂಗಭದ್ರೆ-ಹೆಚ್ಚಿದ ನೀರಿನ ಬವಣೆ

■ವಿಜಯಸಾಕ್ಷಿ ಸುದ್ದಿ, ಹರಪನಹಳ್ಳಿ

ದಿನಗಳು ಕಳೆದಂತೆ ಬೇಸಿಗೆಯ ಧಗೆ ಹೆಚ್ಚುತ್ತಿದ್ದು, ನೀರಿನ ಸಮಸ್ಯೆ ಕಗ್ಗಂಟಾಗಿ ತಲೆದೋರಿದೆ. ತಾಲೂಕಿನ 64ಕ್ಕೂ ಅಧಿಕ ಕಡೆಗಳಲ್ಲಿ ನೀರಿನ ಸಮಸ್ಯೆ ಉಲ್ಬಣಗೊಂಡಿದ್ದು, ಅಣಜೀಗೆರೆ ಪಂಚಾಯಿತಿ ವ್ಯಾಪ್ತಿಯ ಹುಣಸೀಕಟ್ಟೆ, ಶ್ರೀನಿವಾಸಪುರ, ಅಣಜೀಗೆರೆ, ಉಚ್ಚಂಗಿದುರ್ಗ, ಚಟ್ನೀಹಳ್ಳಿ , ಮಾದಿಹಳ್ಳಿ, ಯು ಕಲ್ಲಹಳ್ಳಿ ಸೇರಿದಂತೆ ಜಗಳೂರು ವಿಧಾನಸಭಾ ವ್ಯಾಪ್ತಿಗೆ ಒಳಪಡುವ 7 ಗ್ರಾಮ ಪಂಚಾಯಿತಿಗಳಲ್ಲಿ ನೀರಿನ ಸಮಸ್ಯೆ ವಿಪರೀತವಾಗಿದೆ.



ಅಣಜೀಗೇರೆ ಗ್ರಾಮದಲ್ಲಿ 3 ದಿನಗಳಿಗೊಮ್ಮೆ ನೀರು ಬಿಡುತ್ತಿದ್ದು, ಗ್ರಾಮಸ್ಥರು ನೀರಿಗಾಗಿ ಪರದಾಡುವಂತಾಗಿದೆ.



ಬಿಸಿಲಿನ ಧಗೆ ಹೆಚ್ಚಿದಂತೆ ಅಂತರ್ಜಲದ ಮಟ್ಟ ಕಡಿಮೆಯಾಗಿದ್ದು, ನೀರು ಪೂರೈಕೆ ಕಷ್ಟವಾಗುತ್ತಿದೆ. ಆದರೆ ಅತಿಯಾದ ಕೊರತೆ ಇರುವ ಕಡೆ ಬೋರ್‌ವೆಲ್‌ಗಳ ನೀರನ್ನು ಟ್ಯಾಂಕರ್‌ನಿಂದ ಪ್ರತಿನಿತ್ಯ ಸರಬರಾಜು ಮಾಡಲಾಗುತ್ತಿದೆ. ತುಂಗಭದ್ರೆಯು ಸಂಪೂರ್ಣ ಬತ್ತುತ್ತಿದ್ದು, ಪಟ್ಟಣದ ಸಾರ್ವಜನಿಕರು ನೀರನ್ನು ಮಿತವಾಗಿ ಬಳಕೆ ಮಾಡುವ ಮೂಲಕ ಸಹಕರಿಸಬೇಕು.

**- ಕಿರಣ್ ನಾಯ್ಕ ಆರ್.**

ಗ್ರಾಮೀಣ ಕುಡಿಯುವ ಮತ್ತು ನೈರ್ಮಲ್ಯ ಉಪವಿಭಾಗ


ಬೋರ್‌ವೆಲ್‌ಗಳ ಫ್ಲೋರೈಡ್‌ಯುಕ್ತ ನೀರನ್ನು ಅನಿವಾರ್ಯವಾಗಿ ಬಳಸಬೇಕಾದ ಪರಿಸ್ಥಿತಿ ಎದುರಾಗಿದೆ. ಸುಮಾರು 4-5 ವರ್ಷಗಳಿಂದ ಇದೇ ತರಹದ ನೀರಿನ ಬಳಕೆಯಿಂದ ಗ್ರಾಮಸ್ಥರು ಕಾಯಿಲೆ ಬೀಳುತ್ತಿದ್ದಾರೆ.

ತುಂಗಭದ್ರ ನದಿಯ ನೀರು ಸಂಪೂರ್ಣ ಬತ್ತಿಹೋಗುವ ಹಂತಕ್ಕೆ ತಲುಪಿದೆ. ಮುಂದಿನ 8-10 ದಿನಗಳಿಗೆ ಸರಬರಾಜು ಮಾಡುವಷ್ಟು ಮಾತ್ರ ನೀರಿದ್ದು, ಇರುವ ನೀರಿನ ಸಂಗ್ರಹಣೆಗಾಗಿ ಗೋಕಟ್ಟೆಯಂತಹ ತಡೆಗೋಡೆ ನಿರ್ಮಿಸಿ, 5 ಹೆಚ್‌ಪಿ ಮೋಟಾರ್ ಬಳಸಿ, ಜಾಕ್ವೆಲ್ ಪಂಪ್‌ಸೆಟ್ ಮೂಲಕ ನೀರು ಸರಬರಾಜು ಮಾಡಲು ಪುರಸಭೆಯಿಂದ ಕ್ರಮ ಕೈಗೊಳ್ಳಲಾಗಿದೆ.

ಮುಂಜಾಗ್ರತಾ ಕ್ರಮವಾಗಿ ಈಗಾಗಲೇ 72 ಕೊಳವೆ ಬಾವಿಗಳನ್ನು ಕೃಷಿಕರಿಂದ ಗುತ್ತಿಗೆ ತೆಗೆದುಕೊಂಡಿದ್ದು, ಟ್ಯಾಂಕರ್ ಮೂಲಕ ಪಟ್ಟಣಕ್ಕೆ ಸರಬರಾಜು ಮಾಡುವ ಕ್ರಮ ಕೈಗೊಳ್ಳಲಾಗಿದೆ.

ಪುರಸಭೆ ಮುಖ್ಯಾಧಿಕಾರಿ ಎರಗುಡಿ ಶಿವಕುಮಾರ ಮಾತನಾಡಿ, ಕಳೆದ ವರ್ಷ ಮಳೆಯ ಕೊರತೆಯಾದ ಕಾರಣ ನಿಗದಿತ ಸಮಯಕ್ಕೂ ಮುನ್ನ ತುಂಗಭದ್ರೆ ಬತ್ತುವ ಹಂತಕ್ಕೆ ಬಂದಿದೆ. ಇನ್ನೂ ಕೇವಲ 8-10 ದಿನಗಳಿಗೆ ಮಾತ್ರ ಆಗುವಷ್ಟು ನೀರು ಸಂಗ್ರಹವಿದೆ. ಮುಂಜಾಗ್ರತಾ ಕ್ರಮವಾಗಿ ಪಟ್ಟಣದ ಹಡಗಲಿ ರಸ್ತೆ, ಕೊಟ್ಟೂರು ರಸ್ತೆಯಲ್ಲಿರುವ ಹಳೆಯ ಬಾವಿಗಳನ್ನು ಪುರಸಭೆ ವತಿಯಿಂದ ಸ್ವಚ್ಛಗೊಳಿಸಿ, ಪಟ್ಟಣದ ಸಾರ್ವಜನಿಕರಿಗೆ ದಿನಬಳಕೆಗಾಗಿ ನೀರನ್ನು ಸರಬರಾಜು ಮಾಡಲಾಗುತ್ತದೆ ಎಂದರು.

## ದೇಶಭಕ್ತರ ತ್ಯಾಗದ ಸ್ಮರಣೆ ಮಾಡಿ



■ವಿಜಯಸಾಕ್ಷಿ ಸುದ್ದಿ, ಮುಳಗುಂದ

ಪೂರ್ವಜರ ತ್ಯಾಗ ಬಲಿದಾನದ ಸಂಕೇತವೇ ಸ್ವಾತಂತ್ರ್ಯವಾಗಿದೆ ಎಂದು ಡಾ. ಎಸ್.ಸಿ. ಚವಡಿ ಹೇಳಿದರು.

ಅವರು ಪಟ್ಟಣದ ರೇಣುಕಾ ಎಲ್ಲಮ್ಮಾ ದೇವಸ್ಥಾನದಲ್ಲಿ ಪತಂಜಲಿ ಯೋಗ ಸಮಿತಿ ವತಿಯಿಂದ ಬಲಿದಾನ ದಿವಸ ಕಾರ್ಯಕ್ರಮದಲ್ಲಿ ಭಗತ್ ಸಿಂಗ್, ಸುಖದೇವ, ರಾಜಗುರು ಅವರ ಭಾವಚಿತ್ರಕ್ಕೆ ಪುಷ್ಪ ನಮನ ಸಲ್ಲಿಸಿ ಮಾತನಾಡಿದರು.

ಸ್ವಾತಂತ್ರ್ಯ ಸಂಗ್ರಾಮದಲ್ಲಿ ಭಗತ್ ಸಿಂಗ್, ಸುಖದೇವ, ರಾಜಗುರು ತಮ್ಮ ಪ್ರಾಣವನ್ನು ತ್ಯಾಗ ಮಾಡಿ ನಮಗೆ ಸ್ವಾತಂತ್ರ್ಯ ದೊರಕಿಸಿಕೊಟ್ಟವರು. ಇಂತಹ ಮಹನೀಯರ, ದೇಶ ಭಕ್ತರ ತ್ಯಾಗ-ಬಲಿದಾನದ ಸ್ಮರಣೆ ನಿತ್ಯ ಮಾಡುವುದರ ಜೊತೆಗೆ ನಮ್ಮಲ್ಲಿ ದೇಶ ಪ್ರೇಮವನ್ನು ಬೆಳಸಿಕೊಳ್ಳಬೇಕು ಎಂದರು.

ಯೋಗ ಶಿಕ್ಷಕ ಪ್ರಕಾಶ ಮದ್ದಿನ, ಮಂಜುನಾಥ ಬಿಳೆಯಲಿ, ಕೆ.ಎಂ. ಶೇಖ ಹಾಗೂ ಯೋಗಪಟುಗಳು ಇದ್ದರು.

## ಶಾಲಾ ಮಕ್ಕಳಿಗೆ ಕಲಿಕಾ ಸಾಮಗ್ರಿ ವಿತರಣೆ



■ವಿಜಯಸಾಕ್ಷಿ ಸುದ್ದಿ, ಗದಗ

ಸಮೀಪದ ಸರ್ಕಾರಿ ಕಿರಿಯ ಪ್ರಾಥಮಿಕ ಶಾಲೆ ಅಡವಿಸೋಮಾಪೂರ ಸಣ್ಣ ತಾಂಡೆ ಶಾಲೆಯ ಮಕ್ಕಳಿಗೆ ಶ್ರೀ ಸಿವಾಂಚಿ ಓಸವಾಲ ಜೈನ್ ಸಂಘ ಗದಗ, ಶ್ರೀ ಸಿವಾಂಚಿ ಓಸವಾಲ ಮಹಿಳಾ ಜೈನ್ ಸಂಘ ಗದಗ ವತಿಯಿಂದ ಶಾಲಾ ಮಕ್ಕಳಿಗೆ ಕಲಿಕಾ ಸಾಮಗ್ರಿಗಳನ್ನು ವಿತರಿಸಲಾಯಿತು.

ಸಂಘದ ಅಧ್ಯಕ್ಷ ಜಯಂತಿಲಾಲ ಬನ್ಸಾಲಿ ಮಾತನಾಡಿ, ಯಾವುದೇ ಮಗು ಮಧ್ಯದಲ್ಲಿ ಶಾಲೆ ಬಿಡದೆ ಉತ್ತಮವಾದ ಶಿಕ್ಷಣ ಪಡೆದು ಒಳ್ಳೆಯ ನಾಗರಿಕರಾಗಬೇಕು ಎಂದರು.


ಶಾಲೆ ಮುಖ್ಯ ಶಿಕ್ಷಕ ಮಲ್ಲೇಶ ಡಿ.ಎಚ್. ಮಾತನಾಡಿ, ಶಾಲಾ ಮಕ್ಕಳಿಗೆ ಸಹಾಯ ಮಾಡುವುದು ಎಂದರೆ ದೇವರ ಸೇವೆ ಮಾಡಿದ ಹಾಗೆ ಎಂದು ಅಭಿಪ್ರಾಯಪಟ್ಟರಲ್ಲದೆ, ಸಂಘಟಕರನ್ನು ಅಭಿನಂದಿಸಿದರು.

ನಿರ್ಭಯಾಲಾಲ ಹುಂಡಿಯಾ, ಪ್ರವೀಣ ಸಂಕಲೇಚಾ, ಅರವಿಂದ ಬಂದಾ, ಮುಖೇಶ ಜೈನ್, ಅರವಿಂದ ಬನ್ಸಾಲಿ, ವರ್ಧಮಾನ ಜೈನ್, ಶ್ರೀ ಸಿವಾಂಚಿ ಓಸವಾಲ ಮಹಿಳಾ ಸಂಪದ ಕಾರ್ಯದರ್ಶಿ ಮೀನಾ ಬನ್ಸಾಲಿ, ರಿಂಕು ತಾತೇಡ, ಪ್ರೀತಿ ಲುಂಕಡ, ಶೋಭಾ ಬಾಫಣಾ, ಪಿಂಕಿ ಜೀರಾವಾಲ, ಕಮಲಾಬಾಯಿ ಜೈನ್, ಅನಿತಾ ಜೈನ್, ಮಹಿಳಾ ಸಂಪದ ಪದಾಧಿಕಾರಿಗಳು, ಶಾಲೆಯ ಶಿಕ್ಷಕರಾದ ಎಸ್.ಜಿ. ಅಮ್ಮಿನಭಾವಿ, ಎಸ್.ಟಿ. ಹಳಕಟ್ಟಿ, ಪಿ.ಬಿ. ಕಿಲಬನವರ, ಮಾರುತಿ ಪವಾರ, ವೆಂಕಟೇಶ್ ಲಮಾಣಿ, ಲಚ್ಚಪ್ಪ ಲಮಾಣಿ, ಸೋಮನಾಥ ಲಮಾಣಿ, ಮೌನೇಶ್ ಲಮಾಣಿ, ಬಿಸಿಯೂಟ ಸಿಬ್ಬಂದಿಗಳಾದ ಗಂಗವ್ವ ಲಮಾಣಿ, ಸಾವಿತ್ರಿ ರಾಠೋಡ, ದೇವಕ್ಕ ಲಮಾಣಿ, ಲಕ್ಷ್ಮೀ ಲಮಾಣಿ, ಶಾಂತವ್ವ ರಾಠೋಡ, ರೇಣುಕಾ ಲಮಾಣಿ, ಗೀತಾ ರಾಠೋಡ, ಶಾಲಾ ಮಕ್ಕಳು ಇದ್ದರು.

# ಚರಂಡಿ ನಿರ್ಮಾಣದ ಸ್ಥಳ ಪರಿಶೀಲಿಸಿ

■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಪಟ್ಟಣದ ದೂದಪೀರಾಂ ದರ್ಗಾ ಹತ್ತಿರ ದರ್ಗಾ ಕಮಿಟಿಯವರು ರಸ್ತೆ ಮೇಲೆಯೇ ಚರಂಡಿ ನಿರ್ಮಾಣ ಮಾಡುತ್ತಿದ್ದು, ಇದರಿಂದ ಸಂಚಾರಕ್ಕೆ ಅಡ್ಡಿಯಾಗುತ್ತದೆ. ಕಾರಣ, ಪುರಸಭೆಯವರು ಸ್ಥಳ ಪರಿಶೀಲಿಸಿ ಕ್ರಮ ಕೈಗೊಳ್ಳಬೇಕು ಎಂದು ಹಳ್ಳದಕೇರಿ ಓಣಿಯ ರೈತ ಸಮುದಾಯ ಪುರಸಭೆ ಮುಖ್ಯಾಧಿಕಾರಿಗಳಿಗೆ ಮನವಿ ಸಲ್ಲಿಸಿದರು.



ಈ ವೇಳೆ ಮಾತನಾಡಿದ ರೈತರಾದ ಶಿವಣ್ಣ ಕಟಗಿ, ಪರಮೇಶ್ವರಪ್ಪ ಅಂದಲಗಿ, ಈ ಮೊದಲು ಚರಂಡಿ ಇದ್ದ ಜಾಗದಲ್ಲಿಯೇ ಚರಂಡಿ ನಿರ್ಮಾಣ ಮಾಡಬೇಕು. ಬದಲಾಗಿ ರಸ್ತೆ ಜಾಗದಲ್ಲಿ ಮಾಡುವುದದಿಂದ ಸಂಚಾರಕ್ಕೆ ಅಡಚಣೆಯಾಗುತ್ತದೆ. ದರ್ಗಾಕ್ಕೆ ನಿತ್ಯ ಅಪಾರ ಸಂಖ್ಯೆಯ ಭಕ್ತರು, ವಾಹನಗಳು ಬರುತ್ತವೆ. ನೂರಾರು ಅಟೋಗಳು ರಸ್ತೆ ಪಕ್ಕದಲ್ಲಿಯೇ ನಿಂತಿರುತ್ತವೆ. ಮೊದಲೇ ಇಕ್ಕಟ್ಟಾಗಿರುವುದರಿಂದ ರೈತರು ಸಂಚರಿಸುವ ಪ್ರಮುಖವಾದ ಈ ಮಾರ್ಗದಲ್ಲಿ ನಿತ್ಯವೂ ತೆ-ಊಂದರೆ, ತಂಟೆ-ತಕರಾರು ಉಂಟಾಗುವ ಸಾಧ್ಯತೆಯಿದೆ. ಇವೆಲ್ಲವನ್ನೂ ಪರಿಗಣಿಸಿ ದರ್ಗಾ ಕಮಿಟಿಯವರಿಗೆ ಪುರಸಭೆಯವರು ಚರಂಡಿ ನಿರ್ಮಾಣಕ್ಕೆ ಅನುಮತಿ ನೀಡಬೇಕು ಎಂದರು.

ಮನವಿ ಸ್ವೀಕರಿಸಿದ ಮುಖ್ಯಾಧಿಕಾರಿ ಮಹೇಶ ಹಡಪದ, ಎಲ್ಲವನ್ನೂ ಪರಿಗಣಿಸಿ ಕಾನೂನು ಬದ್ಧವಾಗಿ ಚರಂಡಿ ನಿರ್ಮಾಣಕ್ಕೆ ಅವಕಾಶ ಕಲ್ಪಿಸಿಕೊಡಲಾಗುವುದು ಎಂದರು. ನವೀನ ಬೆಳ್ಳಟ್ಟಿ, ಮಂಜನಗೌಡ ಪಾಣಿಗಟ್ಟಿ, ಎಂ.ಬಿ. ನೀಲಪ್ಪಗೌಡ್ರ, ಉಳವಪ್ಪ ಪಾಣಿಗಟ್ಟಿ, ದಾನಪ್ಪ ಸಜ್ಜನ, ರಾಜು ಬೆಲ್ಲದ, ಬಸನಗೌಡ ಉದ್ದನಗೌಡ್ರ, ಮುದಕಪ್ಪ ಕೊಂಗಿ, ಶಂಕರಣ್ಣ ಪಾಣಿಗಟ್ಟಿ, ಸೋಮು ಕರೆಯತ್ತಿನ, ಗಣೇಶ ಗೋಡಿ, ಮಲ್ಲೇಶ ಗೋಗಿಮಠ, ಗಣೇಶ ನೂಲ್ವಿ ಇದ್ದರು.

# ಸೋಮವಾರದಿಂದ 5, 8, 9 ನೇ ತರಗತಿ ಪಬ್ಲಿಕ್ ಪರೀಕ್ಷೆ

■ವಿಜಯಸಾಕ್ಷಿ ಸುದ್ದಿ, ಬೆಂಗಳೂರು

5, 8ಮತ್ತು 9ನೇ ತರಗತಿಯ ವಿದ್ಯಾರ್ಥಿಗಳಿಗೆ ಬೋರ್ಡ್ ಪರೀಕ್ಷೆ ನಡೆಸುವ ರಾಜ್ಯ ಸರ್ಕಾರದ ನಿರ್ಧಾರವನ್ನು ಎತ್ತಿಹಿಡಿದ ಕರ್ನಾಟಕ ಹೈಕೋರ್ಟ್‌ನ ವಿಭಾಗೀಯ ಪೀಠವು ಪರೀಕ್ಷಾ ಪ್ರಕ್ರಿಯೆಯನ್ನು ಪೂರ್ಣಗೊಳಿಸಲು ಶುಕ್ರವಾರ ಅನುಮತಿ ನೀಡಿದೆ.

ಮಾರ್ಚ್ 25 ರಿಂದ ರಾಜ್ಯಾದ್ಯಂತ ಎಸ್ ಎಸ್ ಎಲ್ ಸಿ ಪರೀಕ್ಷೆ ಆರಂಭವಾಗಲಿದೆ. 5, 8 ಮತ್ತು 9ನೇ ತರಗತಿ ಪಬ್ಲಿಕ್ ಪರೀಕ್ಷೆಗೆ ಕುರಿತು ಹಲವು ಸುತ್ತಿನ ಕಾನೂನು ಸಮರದ ಬಳಿಕ ಪಬ್ಲಿಕ್ ಪರೀಕ್ಷೆ ಮುಂದುವರಿಸಲು ರಾಜ್ಯ ಹೈಕೋರ್ಟ್ ಶುಕ್ರವಾರ ಬೆಳಗ್ಗೆ ಗ್ರೀನ್ ಸಿಗ್ನಲ್ ನೀಡಿತ್ತು. ಸೋಮವಾರದಿಂದ ಪರೀಕ್ಷೆ ಮುಂದುವರಿಸಲು ಸರ್ಕಾರದ ಶಿಕ್ಷಣ ಇಲಾಖೆ ನಿರ್ಧರಿಸಿ ವೇಳಾಪಟ್ಟಿ ಪ್ರಕಟಿಸಿದೆ.

ಮಾರ್ಚ್ 25 ರಿಂದ ಪರೀಕ್ಷೆ ನಡೆಯಲಿದ್ದು, 28ಕ್ಕೆ ಕೊನೆಯ ಪರೀಕ್ಷೆ ಇರುತ್ತದೆ ಎಂದು ಶಾಲಾ ಶಿಕ್ಷಣ ಇಲಾಖೆ ಆಯುಕ್ತರ ಆದೇಶ ತಿಳಿಸಿದೆ. ಎಸ್‌ಎಸ್‌ಎಲ್‌ಸಿ ಪರೀಕ್ಷೆ ನಡೆಯುವ ದಿನ ಮಧ್ಯಾಹ್ನ 2.30ಕ್ಕೆ ಪರೀಕ್ಷೆ ನಡೆಯಲಿದ್ದು, ಎಸ್‌ಎಸ್‌ಎಲ್‌ಸಿ ಪರೀಕ್ಷೆ ಇಲ್ಲದ ದಿನ ಬೆಳ್ಳಗೆ 10 ಗಂಟೆಗೆ ಪರೀಕ್ಷೆ ನಡೆಯಲಿದೆ ಎಂದು ಆದೇಶದಲ್ಲಿ ತಿಳಿಸಲಾಗಿದೆ.

ಮುಂಬರುವ ಶೈಕ್ಷಣಿಕ ವರ್ಷಗಳಿಗೆ ಇದೇ ರೀತಿಯ ಮೌಲ್ಯಮಾಪನಗಳನ್ನು ಆದೇಶಿಸುವ ಮೊದಲು ಮಧ್ಯಸ್ಥಗಾರರನ್ನು ಸಂಪರ್ಕಿಸುವಂತೆ ವಿಭಾಗೀಯ ಪೀಠವು ಸರ್ಕಾರಕ್ಕೆ ನಿರ್ದೇಶನ ನೀಡಿದೆ. ಕರ್ನಾಟಕದ ನೋಂದಾಯಿತ ಅನುದಾನರಹಿತ ಖಾಸಗಿ ಶಾಲೆಗಳ ನಿರ್ವಹಣಾ ಸಂಘ ಮತ್ತು ಅನುದಾನರಹಿತ ಮಾನ್ಯತೆ ಪಡೆದ ಶಾಲೆಗಳ ಸಂಘಟನೆಯನ್ನು ಪ್ರತಿನಿಧಿಸುವ ವಕೀಲ ಕೆ.ವಿ.ಧನಂಜಯ ಅವರು ಮಾರ್ಚ್ 6 ರಂದು ಏಕ ನ್ಯಾಯಾಧೀಶರು ನೀಡಿದ ಆದೇಶವನ್ನು ಸಮರ್ಥಿಸಿಕೊಂಡಿದ್ದರು.

**ಆದ್ರಳ್ಳಿಯಲ್ಲಿ ಗವಿ ಸಿದ್ದೇಶ್ವರ ಜಾತ್ರಾ ಮಹೋತ್ಸವ ಅಂಗವಾಗಿ ರಾಜ್ಯ ಮಟ್ಟದ ಕುಸ್ತಿ ಪಂದ್ಯಾವಳಿ**

# ಮೈನವಿರೇಳಿಸಿದ ಜಂಗಿ ನಿಕಾಲಿ ಕುಸ್ತಿ

■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ತಾಲೂಕಿನ ಆದ್ರಳ್ಳಿಯಲ್ಲಿ ಗವಿ ಸಿದ್ದೇಶ್ವರ ಜಾತ್ರಾ ಮಹೋತ್ಸವ ಅಂಗವಾಗಿ ರಾಜ್ಯ ಮಟ್ಟದ ಭಾರಿ ಜಂಗಿ ನಿಕಾಲಿ ಕುಸ್ತಿಗಳು ಜರುಗಿದವು. ರಾಜ್ಯದ ವಿವಿಧ ಜಿಲ್ಲೆಗಳ ನೂರಾರು ಕಸ್ತಿಪಟುಗಳು ಸೇರಿ 20 ಜೋಡಿ ವಿಶೇಷ ಕುಸ್ತಿ ಪೈಲ್ವಾನರ ಸೆಣಸಾಟ ನೆರೆದಿದ್ದ ಅಪಾರ ಜನಸ್ತೋಮದ ಮೈನವಿರೇಳಿಸಿತು. ಮುಸ್ಸಂಜೆಯ ಮಬ್ಬಿನಲ್ಲಿ ನಡೆದ ಕುಸ್ತಿ ಪಂದ್ಯಾವಳಿಯಲ್ಲಿ ಸೆಣಸಿದ ಕಲಿಗಳ ವಿವಿಧ ಭಂಗಿ, ಪಟ್ಟು, ಕರಾಮತ್ತುಗಳು ನೋಡುಗರ ಮೈನವಿರೇಳಿಸುವಂತೆ ಮಾಡಿದವು.

ಶ್ರೀಮಠದ ಕುಮಾರ ಮಹಾರಾಜರು ಕುಸ್ತಿ ಪಂದ್ಯಾವಳಿಗೆ ಚಾಲನೆ ನೀಡಿ ಮಾತನಾಡಿ, ಕುಸ್ತಿ ನಮ್ಮ ಹಿರಿಯರಿಂದ ಬಳುವಳಿಯಾಗಿ ಬಂದ ಜಾನಪದ ಶೈಲಿಯ ಗ್ರಾಮೀಣ ಕ್ರೀಡೆಯಾಗಿದೆ. ನಮ್ಮ ಸಂಸ್ಕೃತಿ, ಪರಂಪರೆಯ ಪ್ರತೀಕವಾದ ಗ್ರಾಮೀಣ ಕ್ರೀಡೆಗಳನ್ನು ಉಳಿಸಿ-ಬೆಳೆಸಿಕೊಂಡು ಹೋಗುವುದು ಎಲ್ಲರ ಜವಾಬ್ದಾರಿಯಾಗಿದೆ. ಯುವ ಜನತೆ ದುಶ್ಚಟಗಳಿಂದ ದೂರವಿದ್ದು ಆರೋಗ್ಯಪೂರ್ಣ ಜೀವನ ಮತ್ತು ಉತ್ತಮ ಸಮಾಜಕ್ಕೆ ಕಾರಣರಾಗಬೇಕು. ಜಾತ್ರೆ, ಹಬ್ಬ,



ಉತ್ಸವ ಸಂದರ್ಭದಲ್ಲಿ ನಡೆಸುವ ಇಂತಹ ಗ್ರಾಮೀಣ ಕ್ರೀಡೆಗಳನ್ನು ಪ್ರೋತ್ಸಾಹಿಸಬೇಕು ಎಂದರು.

ಮಾಜಿ ಶಾಸಕರಾದ ರಾಮಣ್ಣ ಲಮಾಣಿ, ರಾಮಕೃಷ್ಣ ದೊಡ್ಡಮನಿ ಕುಸ್ತಿ ಪಂದ್ಯ ವೀಕ್ಷಿಸಿ ಪ್ರಸಂಶಿಸಿದರು. ಹಿರಿಯ ಆಟಗಾರ ಹುಸೇನಸಾಬ್ ಅಗಸಿಬಾಗಿಲು, ಗುರಪ್ಪ ವಡ್ಡರ,



ವಿವಿಧ ಜಿಲ್ಲೆಗಳಿಂದ ಪ್ರಸಿದ್ಧ ಕುಸ್ತಿಪಟುಗಳು ಆಗಮಿಸಿದ್ದರು. ಕರ್ನಾಟಕ ಕೇಸರಿ ಸಿದ್ದಪ್ಪ ಗುಲಬರ್ಗ-ಗಜಾನನ ಹನಗುಡಿ, ನಿಶ್ಚಿತ ಮಂಡ್ಯ-ಶಂಕರ ಕಲಾಲ್, ಮಲ್ಲಿಕಾರ್ಜುನ ಯಲವಟ್ಟಿ-ಅಮೃತ್ ತಡಸಿನಕೊಪ್ಪ, ಧ್ರುವ ಉಣಕಲ್-ಅಭಿಷೇಕ ತಡಸಿನಕೊಪ್ಪ, ಸೋನು ಕರಡಿಕೊಪ್ಪ-ನಂದೀಶ ಉಣಕಲ್, ಮಹಾಂತೇಶ ಕರಡಿಕೊಪ್ಪ-ಪ್ರಕಾಶ ಹಿರೇಹೊನ್ನಳ್ಳಿ, ಆಕಾಶ ಕರಡಿಕೊಪ್ಪ-ಉಮೇಶ ತಡಸಿನಕೊಪ್ಪ, ವಿಕ್ರಂ ಉಣಕಲ್-ಶಶಿಧರ ಗಾಮನಗಟ್ಟಿ, ಕುಶಾಲ ಕೆ-ಪ್ರದೀಪ ಗುಡಿಹಾಳ ಈ ವಿಶೇಷ ಕುಸ್ತಿಪಟುಗಳು ಪರಸ್ಪರ ಕಾದಾಡಿ ಗಮನ ಸೆಳೆದರು. ಇವರಲ್ಲಿ 4 ಕುಸ್ತಿಪಟುಗಳು ಬೆಳ್ಳಿಗಧೆ ಮತ್ತು ನಗದು ಪ್ರಶಸ್ತಿ ಪಡೆದರು.

ಸುರೇಶ ಲಮಾಣಿ, ಅಲ್ಲಾಭಕ್ಷಿ ವಾಲಿಕಾರ, ರಾಜೇಸಾಬ್ ಸನ್ನದಿ, ಪರಶುರಾಮ ನಾಯಕ, ಚಂದ್ರು ಲಮಾಣಿ, ಗೋಪಾಲ ಲಮಾಣಿ, ಷಣ್ಮುಖ ವಡ್ಡರ, ರಿಯಾಜ್ ಗದಗ, ಕೃಷ್ಣಾ ವಿ.ಕೆ ಸೇರಿ ಅನೇಕರಿದ್ದರು. ದೇವೇಂದ್ರಪ್ಪ ಗಡೇದ, ಗಿರೀಶ ಲಮಾಣಿ, ಪುಟ್ಟಪ್ಪ ಶಿಗ್ಲಿ ನಿರ್ವಹಿಸಿದರು.

**ರೇಣುಕಾಚಾರ್ಯ ಜಯಂತಿ ಕಾರ್ಯಕ್ರಮದಲ್ಲಿ ಕವಿತಾ ದಂಡಿನ ಅಭಿಪ್ರಾಯ**

# ಜಾತ್ರೆಗಳು ಜಾಗೃತಿ ಮೂಡಿಸುವ ಕೇಂದ್ರಗಳು

■ವಿಜಯಸಾಕ್ಷಿ ಸುದ್ದಿ, ಗದಗ

ಜಾತ್ರೆಗಳು ಜನರಲ್ಲಿ ಧಾರ್ಮಿಕ ಭಾವನೆಗಳನ್ನು ಜಾಗೃತಗೊಳಿಸುವುದರೊಂದಿಗೆ ಮಾನವೀಯ, ಸಾಮಾಜಿಕ, ನೈತಿಕ, ಧಾರ್ಮಿಕ ಮೌಲ್ಯಗಳನ್ನು ಬಿತ್ತುವ ಕೇಂದ್ರಗಳಾಗಿವೆ ಎಂದು ಸಾಹಿತಿ ಕವಿತಾ ದಂಡಿನ ಅಭಿಪ್ರಾಯಪಟ್ಟರು.

ಅವರು ಗದುಗಿನ ಜ.ರೇಣುಕಾಚಾರ್ಯ ಮಂದಿರದಲ್ಲಿ ಜರುಗಿದ ರೇಣುಕಾಚಾರ್ಯ ಜಯಂತಿ ಹಾಗೂ ಜಾತ್ರಾ ಕಾರ್ಯಕ್ರಮದ ಮಹಿಳಾಗೋಷ್ಠಿಯಲ್ಲಿ 'ಮಹಿಳಾ ಜಾಗೃತಿ' ವಿಷಯವಾಗಿ ಮಾತನಾಡಿದರು.

ಕುಟುಂಬದ ಸಂಪೂರ್ಣ ಹೊಣೆಗಾರಿಕೆಯನ್ನು ನಿಭಾಯಿಸಿ ಮನೆಯ ಒಳಗೂ ಹೊರಗೂ ದುಡಿಯುವ ಮಹಿಳೆಯ ಬದುಕಿಗೆ ಭದ್ರತೆಯೇ ಇಲ್ಲದಂತಾಗಿರುವದು




ವಿಷಾದನೀಯ ಎಂದರು.

ಸಾನಿಧ್ಯ ವಹಿಸಿದ್ದ ಮಲ್ಲಸಮುದ್ರದ ಓಂಕಾರೇಶ್ವರ ಮಠದ ಷ.ಬ್ರ.ಫಕ್ಕೀರೇಶ್ವರ ಶಿವಾಚಾರ್ಯ ಮಹಾಸ್ವಾಮಿಗಳು ಮಾತನಾಡಿ, ಸ್ತ್ರೀಯರು ಶಕ್ತಿಯ ಸ್ವರೂಪ ತಾಳ್ಮೆ, ಸಹನೆಯಿಂದ ಮನೆಯನ್ನು ನಿಭಾಯಿಸಿ ಯಶಸ್ವಿಯಾಗಿದ್ದಾರೆ ಎಂದರು.

ಮುಖ್ಯ ಅತಿಥಿಗಳಾಗಿ ಲಲಿತಾ ಬಾಳಿಹಳ್ಳಿಮಠ, ರಜನಿ ಪಾಟೀಲ, ನಾಗರತ್ನ ಹುಬಳೀಮಠ, ವಿಜಯಲಕ್ಷ್ಮೀ ಬಿರಾದಾರ, ಸಾವಿತ್ರಿ ಶಿಗ್ಲಿ, ಸುನಂದಾ ಜೋಬಾಳೆ ಆಗಮಿಸಿದ್ದರು. ವೇದಿಕೆಯ ಮೇಲೆ ಭಕ್ತಿಸೇವೆ ವಹಿಸಿದ್ದ ಗೌರಮ್ಮ ಶಾಬಾದಿಮಠ, ಪಾರ್ವತಿ ಶಾಬಾದಿಮಠ, ಜ್ಯೋತಿ ಚಳಗೇರಿ, ಗಿರಿಜಾ ಕಾಳಗಿ, ಗಿರಿಜಾದೇವಿ ಹಿರೇಮಠ, ಮಂಗಳಾ ಶಾಬಾದಿಮಠ, ಸರ್ವಮಂಗಳ ವೀರಲಿಂಗಯ್ಯನಮಠ ಉಪಸ್ಥಿತರಿದ್ದರು.

ಷ.ಬ್ರ. ರಾಜಶೇಖರ ಶಿವಾಚಾರ್ಯ ಸ್ವಾಮಿಗಳಿಂದ ರೇಣುಕ ದರ್ಶನ ಪ್ರವಚನ ಜರುಗಿ-ತು. ಪಾರ್ವತಿ ಮಾಳೇಕೊಪ್ಪಮಠ ಹಾಗೂ ಸಂಗಡಿಗರು ಪ್ರಾರ್ಥಿಸಿದರು, ಸಂಗಮ್ಮ ಹಿರೇಮಠ ಸ್ವಾಗತಿಸಿದರು, ಲತಾ ಮುತ್ತಿನಪೆಂಡಿಮಠ ನಿರೂಪಿಸಿ ವಂದಿಸಿದರು.

ಕಾರ್ಯಕ್ರಮದಲ್ಲಿ ವ್ಹಿ.ಕೆ. ಗುರುಮಠ, ಮಂಜುನಾಥ ಬೇಲೇರಿ, ಚಂದ್ರು ಬಾಳಿಹಳ್ಳಿಮಠ, ಮಹೇಶ ಬೇಲೇರಿ, ಶಿದ್ಲಿಂಗಪ್ಪ ಚಳಗೇರಿ, ಸುರೇಶ ಅಬ್ಬಿಗೇರಿ, ಶಕುಂತಲಾ ಬೇಲೇರಿ, ಅನ್ನಪೂರ್ಣ ಗಡಾದ, ಮಂಗಲಾ ಬೇಲೇರಿ, ಶಶಿಕಲಾ ಲಕ್ಕನಗೌಡ್ರ, ಸುನಂದಾ ಮಾಳೇಕೊಪ್ಪಮಠ, ವೀರಭದ್ರಯ್ಯ ಧನ್ನೂರಹಿರೇಮಠ, ವ್ಹಿ.ಸಿ. ಅಬ್ಬಿಗೇರಿ ಮುಂತಾದವರಿದ್ದರು.

# ಮುಂದಿನ ಪೀಳಿಗೆಗಾಗಿ ನೀರನ್ನು ಉಳಿಸಿ




■ವಿಜಯಸಾಕ್ಷಿ ಸುದ್ದಿ, ಗದಗ

ನೀರು ಜೀವ ಸಂಜೀವಿನಿ. ನಮಗೆ ಲಭ್ಯವಿರುವ ನೀರನ್ನು ಅಗತ್ಯಕ್ಕೆ ಅನುಸಾರವಾಗಿ ಸಂರಕ್ಷಿಸಿ ಮಿತವ್ಯಯದಿಂದ ಬಳಸಿ ಮುಂದಿನ ಪೀಳಿಗೆಯ ಭವಿಷ್ಯಕ್ಕಾಗಿ ನೀರನ್ನು ಉಳಿಸುವುದೇ ನಮ್ಮ ಗುರಿಯಾಗಿರಲಿ ಎಂದು ಗದಗ-ಬೆಟಗೇರಿ ರೋಟರಿ ಸೆಂಟ್ರಲ್ ಕ್ಲಬ್ ಅಧ್ಯಕ್ಷ ವಿಜಯಕುಮಾರ ಹಿರೇಮಠ ಹೇಳಿದರು.

ಅವರು ಗದಗ-ಬೆಟಗೇರಿ ರೋಟರಿ ಸೆಂಟ್ರಲ್ ಕ್ಲಬ್ ಹಾಗೂ ಇನ್ನರ್‌ವ್ಹೀಲ್ ಕ್ಲಬ್ ಮಿಡ್‌ಟೌನ್‌ನಿಂದ ಜರುಗಿದ ಜಾಗತಿಕ ಜಲ ದಿನ ಆಚರಣೆ ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿ ಮಾತನಾಡಿದರು.

ಭೂಮಿಯ ಮೇಲಿನ ಪ್ರತಿಯೊಂದು ಜೀವಿಗೂ ನೀರು ಅತ್ಯವಶ್ಯ. ಜೀವದ್ರವ ಎನಿಸಿರುವ ನೀರನ್ನು ಅತ್ಯಂತ ಪ್ರಜ್ಞಾಪೂರ್ವಕವಾಗಿ ಬಳಸಿ ಉಳಿಸಲು ನಾವೆಲ್ಲರೂ ಮುಂದಾಗಬೇಕು ಎಂದರು.

ಇನ್ನರ್‌ವ್ಹೀಲ್ ಮಿಡ್‌ಟೌನ್ ಅಧ್ಯಕ್ಷೆ ವಿಜಯಲಕ್ಷ್ಮೀ ಬಿರಾದಾರ ಮಾತನಾಡಿ, ನೀರು ಅತ್ಯವಶ್ಯ ವಸ್ತುವಾಗಿದ್ದು, ಅದರ ಮಹತ್ವವನ್ನು ಸಮುದಾಯಕ್ಕೆ ತಿಳಿಸಿ, ಜನರಲ್ಲಿ ಜಾಗೃತಿ ಮೂಡಿಸಬೇಕಾಗಿರುವದು ಅತ್ಯವಶ್ಯವಾಗಿದೆ ಎಂದರು.

ರೋಟರಿ ಸೆಂಟ್ರಲ್ ಮಾಜಿ ಅಧ್ಯಕ್ಷ ವ್ಹಿ.ಕೆ. ಗುರುಮಠ ಪ್ರಾಸ್ತಾವಿಕವಾಗಿ ಮಾತನಾಡಿ, ಈಗಲೇ ನಾವು ನೀರನ್ನು ಉಳಿಸಿಕೊಳ್ಳದಿದ್ದರೆ ಬರಲಿರುವ ದಿನಮಾನದಲ್ಲಿ ನೀರಿನ ಕೊರತೆಯಿಂದ ಜೀವ ಸಂಕುಲ ತತ್ತರಿಸಿ ಹೋಗಲಿದೆ ಎಂದರು.

ಮಿಡ್‌ಟೌನ್‌ನ ಖಜಾಂಚಿ ರಾಣಿ ಚಂದಾವರಿ ಮಾತನಾಡಿ, ಅತಿಯಾದ ಪರಿಸರ ಮಾಲಿನ್ಯ ಹಾಗೂ ಜಲಸಂಪನ್ಮೂಲದ ಅನಗತ್ಯವಾಗಿ ವ್ಯರ್ಥ ಮಾಡುತ್ತಿರುವುದರಿಂದ ನೀರಿನ ಕೊರತೆ ಉಂಟಾಗುತ್ತದೆ ಎಂದರು.

ಗದಗ ಸೆಂಟ್ರಲ್ ರೋಟರಿ ಕಾರ್ಯದರ್ಶಿ ಸಂತೋಷ ತೋಟಗಂಟಿಮಠ ಸ್ವಾಗತಿಸಿದರು. ಸಿ.ಜಿ. ಹಿರೇಗೌಡರ ವಂದಿಸಿದರು. ಮಂಜುನಾಥ ಬೇಲೇರಿ, ಸುರೇಶ ಅಬ್ಬಿಗೇರಿ, ಸ್ನೇಹಾ ಹಿರೇಮಠ, ಗೌತಮ್ ಗಡ್ಡಿ, ಅನಿತಾ ತೋಟಗಂಟಿಮಠ, ನೇತ್ರಾ ಗಡ್ಡಿ ಮುಂತಾದವರಿದ್ದರು.

**ಜಗದ್ಗುರು ರೇಣುಕಾಚಾರ್ಯ ಜಯಂತಿ ಕಾರ್ಯಕ್ರಮದಲ್ಲಿ ಶ್ರೀಸಿದ್ಧಲಿಂಗ ಶಿವಾಚಾರ್ಯ ಮಹಾಸ್ವಾಮಿಗಳು**

# ಮನುಕುಲಕ್ಕೆ ಶ್ರೀರೇಣುಕಾಚಾರ್ಯರ ಕೊಡುಗೆ ಅಪಾರ

■ವಿಜಯಸಾಕ್ಷಿ ಸುದ್ದಿ, ಕೊಪ್ಪಳ

ಜಗದ್ಗುರು ರೇಣುಕಾ ಚಾರ್ಯರು ಬೋಧಿಸಿದ ತತ್ವಗಳು ಇಂದಿಗೂ ಪ್ರಚಲಿತವಾಗಿವೆ. ಶ್ರೀಸಿದ್ಧಾಂತ ಶಿಖಾಮಣಿ ಗ್ರಂಥದಲ್ಲಿ ಸಮಾನತೆಯನ್ನು ಬೋಧಿಸಿದ ರೇಣುಕಾಚಾರ್ಯರರು ಮಾನವ ಕುಲಕ್ಕೆ ಮಹೋನ್ನತ ಕೊಡುಗೆ ನೀಡಿದ್ದಾರೆ ಎಂದು ಹರಗಿನದೋಣಿ ಪಂಚ ವಣ್ಣಿಗಿ ಸಂಸ್ಥಾನ ಹಿರೇಮಠದ ಶ್ರೀ ಷ.ಬ್ರ. ಅಭಿನವ ಸಿದ್ದಲಿಂಗ ಶಿವಾಚಾರ್ಯ ಮಹಾಸ್ವಾಮಿಗಳು ಹೇಳಿದರು.

ನಗರದ ಶ್ರೀವೀರಮಹೇಶ್ವರ ಕ್ಷೇಮಾಭಿವೃದ್ಧಿ ಸಂಘದ ಸಭಾಂಗಣದಲ್ಲಿ ಶನಿವಾರ ಆಯೋಜಿಸಿದ್ದ ಜಗದ್ಗುರು ರೇಣುಕಾಚಾರ್ಯ ಜಯಂತಿ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು.

ಮಾನವ ಕುಲಕ್ಕೆ ಧರ್ಮ ಎನ್ನುವುದು ಮುಖ್ಯವಾದದು. ಎಲ್ಲರೂ ಧರ್ಮದಿಂದ ನಡೆದುಕೊಂಡಾಗಲೇ ಮಾನವರಾಗಿ ಜನಿಸಿದ್ದಕ್ಕೆ ಸಾರ್ಥಕವಾಗುತ್ತದೆ. ಸರ್ವರಿಗೂ ಸಮಪಾಲು ಸಮಬಾಳು ಎಂಬ ಪರಿಕಲ್ಪನೆಗಳಿಗೆ ಶ್ರೀ-ರೇಣುಕಾಚಾರ್ಯರ ಬೋಧನೆಗಳು, ಅವರು ಹಾಕಿಕೊಟ್ಟ ಮಾರ್ಗದಲ್ಲಿ ಎಲ್ಲರೂ ನಡೆಯೋಣ, ಎಲ್ಲರನ್ನೂ ಸಮಾನರಾಗಿ ಕಾಣೋಣ.

ಶ್ರೀರೇಣುಕಾಚಾರ್ಯ ಅವರ ಬೊಧನೆಯ ಸಾರವನ್ನು ಶ್ರೀಶಿವಯೋಗಿ ಶಿವಾಚಾರ್ಯರು ಸಿದ್ಧಾಂತ ಶಿಖಾಮಣಿ ಕೃತಿಯಲ್ಲಿ ಸಂಪಾದಿಸಿದ್ದಾರೆ. ಕಾಯಕವೇ ಕೈಲಾಸ ಎಂಬ ತತ್ವ ಈ ಕೃತಿಯಲ್ಲಿ ಅಡಕವಾಗಿದೆ. ಜಾತಿ, ಮತ, ಬೇಧ-ಭಾವಗಳಿಂದ ಮುಕ್ತವಾಗಿ ಮಾನವರೆಲ್ಲಾ ಒಂದೇ ಎನ್ನುವುದನ್ನು ಶ್ರೀರೇಣುಕಾಚಾರ್ಯರು ತೋರಿಸಿ ಕೊಟ್ಟರು ಎಂದರು.



ಜಯಂತಿಯಲ್ಲಿ ಶ್ರೀನಾಗಯ್ಯ ಸ್ವಾಮಿಗಳು ಶಾಖಾಮಠ, ಕಂಪಸಾಗರ ಸಾನಿಧ್ಯ ವಹಿಸಿದ್ದರು. ವೀರಶೈವ ಲಿಂಗಾಯತ ಮಹಾಸಭಾದ ಅಧ್ಯಕ್ಷ ಶರಣಪ್ಪ ಹ್ಯಾಟಿ, ಜಂಗಮ ಸಮಾಜದ ಅಧ್ಯಕ್ಷ ಸಿದ್ದಯ್ಯ ಹಿರೇಮಠ, ಸಮಾಜದ ಮುಖಂಡರಾದ ಹಂಪಯ್ಯ ಹಿರೇಮಠ, ವೀರಪಾಕ್ಷಯ್ಯ ಗದಗಿನಮಠ, ವಿರೇಶ ಮಹಾಂತನಯ್ಯಮಠ, ಕೊಟ್ರಬಸಯ್ಯ, ಗಿರೀಶ ಹಿರೇಮಠ, ನಾಗಭೂಷಣ ಸಾಲಿಮಠ, ಬಸಯ್ಯ ಹಿರೇಮಠ, ಗವಿಸಿದ್ದಯ್ಯ ಲಿಂಗಬಸಯ್ಯನಮಠ, ಪಿ.ಬಿ. ಹಿರೇಮಠ, ಶಿವಕುಮಾರ್ ಹಿರೇಮಠ, ಸಿದ್ದು ಹಿರೇಮಠ, ಭಗತ್, ಶರಣಯ್ಯ ಹಿರೇಮಠ, ಕಲ್ಯಯ್ಯ ಕಲ್ಯಾಣಗೌಡ್ರು, ಮಂಜು ಗದಗಿನಮಠ, ಶೋಬಾ ಉಂಕಲಿಮಠ, ಶಾಂತಕ್ಕ, ಸವಿತಾ, ಶಾಂತ ಹಿರೇಮಠ, ಕವಿತಾ ಸೇರಿದಂತೆ ಅನೇಕ ಜಂಗಮ ಸಮಾಜ ಮುಖಂಡರು ಪಾಲ್ಗೊಂಡಿದ್ದರು. ಕು. ಪುಟ್ಟರಾಜ ಹಿರೇಮಠ ಪ್ರಾರ್ಥಿಸಿದರು. ಜಗದೀಶ್ ಹಿರೇಮಠ ಸ್ವಾಗತಿಸಿ, ನಿರೂಪಿಸಿದರು.

# ಶಿರಹಟ್ಟಿಯಲ್ಲಿ ಹುಲ್ಲುಗಾಮನ ಮೆರವಣಿಗೆ

■ವಿಜಯಸಾಕ್ಷಿ ಸುದ್ದಿ, ಶಿರಹಟ್ಟಿ

ಪಟ್ಟಣದಲ್ಲಿ ಈ ಹಿಂದಿನಿಂದಲೂ ಸಂಪ್ರದಾಯದಂತೆ ವಿಶೇಷವಾಗಿ ಹುಲ್ಲಿನಿಂದ ತಯಾರಿಸಿದ ಬೃಹತ್ ಹುಲ್ಲುಗಾಮನ ಮೆರವಣಿಗೆಯು ನಡೆಯುತ್ತಾ ಬಂದಿದ್ದು, ಇದೀಗ ಹೋಳಿ ಹಬ್ಬದ ಪ್ರಯುಕ್ತ ಮಾ.24ರ ರಾತ್ರಿ 10 ಗಂಟೆಯಿಂದ ಮಾ.25ರ ಸೋಮವಾರ ಬೆಳಗಿನ ಜಾವದವರೆಗೆ ಪಟ್ಟಣದ ಪ್ರಮುಖ ಬೀದಿಗಳಲ್ಲಿ ಹುಲ್ಲುಗಾಮನ ಬೃಹತ್ ಮೆರವಣಿಗೆಯು ನಡೆಯಲಿದೆ.

**ಅಲಂಕೃತ ಮಂಟಪದಲ್ಲಿ ಕಾಮನ ಮೆರವಣಿಗೆ:** ರವಿವಾರ ರಾತ್ರಿ 10ಗಂಟೆ ಸುಮಾರಿಗೆ ಪಟ್ಟಣದ ಶ್ರೀ ಮಹರ್ಷಿ ವಾಲ್ಮೀಕಿ ವೃತ್ತದಿಂದ ವಿಶೇಷವಾಗಿ ತಯಾರಿಸಿದಂತಹ ಹುಲ್ಲುಗಾಮನ ಮೆರವಣಿಗೆಯು ಪ್ರಾರಂಭವಾಗಲಿದ್ದು, ಕಾಮನ ಮೂರ್ತಿಗೆ ವಿಶೇಷ ಅಲಂಕಾರ ಮತ್ತು ವೇಷಭೂಷಣಗಳನ್ನು ತೊಡಿಸಲಾಗುತ್ತದೆ. ಅಲಂಕೃತ ಎತ್ತುಗಳ ಬಂಡಿಯನ್ನು ಸಹ ಹಸಿರು ತೋರಣಗಳಿಂದ ಸಿಂಗರಿಸಿ ಹುಲ್ಲುಗಾಮನ



ಅದ್ದೂರಿ ಮೆರವಣಿಗೆಯು ನಡೆಯಲಿದ್ದು, ನಂತರ ಬಡಿಗೇರ ಓಣಿ, ಡಬಾಲಿ ಓಣಿ, ಕೆಳಗೇರಿ ಓಣಿ, ಶೆಟ್ಟರ ಓಣಿ ಸೇರಿದಂತೆ ಪ್ರಮುಖ ಬೀದಿಗಳಲ್ಲಿ ಸಂಚರಿಸಿ ಸೋಮವಾರ ಬೆಳಗಿನ ಜಾವ ಮತ್ತೆ ವಾಲ್ಮೀಕಿ ವೃತ್ತದಲ್ಲೇ ಕಾಮದಹನ ನಡೆಯಲಿದೆ.

**ಕಿವಿಗಿಡಚಿಕ್ಕುವ ಹಲಗೆಗಳ ಸದ್ದು:** ಬೃಹತ್ ಮೆರವಣಿಗೆಯುದ್ದಕ್ಕೂ ಸಾವಿರಾರು ಸಂಖ್ಯೆಯಲ್ಲಿ ಯುವಕರು ಭಾಗಿಯಾಗಿ ಕಿವಿಗಿಡಚಿಕ್ಕುವ ರೀತಿಯಲ್ಲಿ ಹಲಗೆಗಳ ಸದ್ದು ಮಾಡುತ್ತಾರೆ. ಯಾರು ಎಷ್ಟೇ ಹೇಳಿದರೂ ತಮಗೆ ಸಾಕಾಗುವವರೆಗೂ ಹಲಗೆಯನ್ನು ಬಾರಿಸುವುದನ್ನು ನಿಲ್ಲಿಸುವದಿಲ್ಲ. ಯುವಕರು ಸಹ ಹಲವು ವೇಷಭೂಷಣಗಳನ್ನು ಧರಿಸಿ ಮೆರವಣಿಗೆಯ ಆಕರ್ಷಣೆಯಾಗುತ್ತಾರೆ. ಮೆರವಣಿಗೆಯಲ್ಲಿ ಅಪಾರ ಸಂಖ್ಯೆಯ ಜನರೂ ಭಾಗಿಯಾಗಲಿದ್ದಾರೆ. ಅಹಿತಕರ ಘಟನೆಗಳು ಜರುಗದಂತೆ ಪಟ್ಟಣದ ಪ್ರಮುಖ ಮುಖಂಡರು ಸಹ ಭಾಗಿಯಾಗಿ ಮೆರವಣಿಗೆಯನ್ನು ಯಶಸ್ವಿಗೊಳಿಸುತ್ತಾ ಬಂದಿದ್ದಾರೆ.

**ಸೋಮವಾರ ಓಕುಳಿ**

**ಸೋಮವಾರ ಬೆಳಗಿನ ಜಾವ ಕಾಮದಹನದ ನಂತರ ಓಕುಳಿ ಪ್ರಾರಂಭವಾಗಲಿದ್ದು, ಪುನಃ ಶ್ರೀ ಮಹರ್ಷಿ ವಾಲ್ಮೀಕಿ ವೃತ್ತದಿಂದಲೇ ಎತ್ತುಗಳೊಂದಿಗೆ ಓಕುಳಿ ಬಂಡಿಯ ಮೆರವಣಿಗೆಯು ಅದೇ ಮಾರ್ಗದಲ್ಲಿ ಸಂಚರಿಸಲಿದ್ದು, ಯುವಕರು ತಮ್ಮ ತಮ್ಮ ಸ್ನೇಹಿತರಿಗೆ ಬಣ್ಣ ಎರಚುವ ಮೂಲಕ 4 ಗಂಟೆಯವರೆಗೂ ಮೆರವಣಿಗೆಯಲ್ಲಿ ಪಾಲ್ಗೊಳ್ಳುವರು.**

**ಪೊಲೀಸ್ ಆಯುಕ್ತೆ ರೇಣುಕಾ ಸುಕುಮಾರ ಮಾಹಿತಿ**

# ನ್ಯಾಯೋಚಿತ ಚುನಾವಣೆಗೆ ಅಗತ್ಯ ಕ್ರಮ

■ವಿಜಯಸಾಕ್ಷಿ ಸುದ್ದಿ, ಧಾರವಾಡ

ಒಟ್ಟು 1719 ರೌಡಿ ಜನರ ಪೈಕಿ 1355 ಜನರ ಮೇಲೆ ಮುಂಜಾಗೃತಾ ಕ್ರಮ ಜರುಗಿಸಲಾಗಿದೆ. ಹುಬ್ಬಳ್ಳಿ-ಧಾರವಾಡ ನಗರದಲ್ಲಿ ಒಟ್ಟು 88 ವಲ್ನರೇಬಲ್ ಪ್ರದೇಶಗಳನ್ನು ಗುರುತಿಸಲಾಗಿದ್ದು, ಚುನಾವಣಾ ಅಪರಾಧಗಳಲ್ಲಿನ ಆರೋಪಿತರ ಮೇಲೆ ಸಿ.ಆರ್.ಪಿ.ಸಿ. ಅಡಿಯಲ್ಲಿ ಮುಂಜಾಗೃತಾ ಕ್ರಮ ಜರುಗಿಸಲಾಗಿದೆ ಎಂದು ಹುಬ್ಬಳ್ಳಿ-ಧಾರವಾಡ ಮಹಾನಗರ ಪೊಲೀಸ್ ಆಯುಕ್ತರಾದ ರೇಣುಕಾ



ಸುಕುಮಾರ ತಿಳಿಸಿದ್ದಾರೆ.

ಈ ಕುರಿತು ಪ್ರಕಟಣೆ ನೀಡಿರುವ ಅವರು, ಅವಳಿ ನಗರ ವ್ಯಾಪ್ತಿಯಲ್ಲಿನ 88 ವಲ್ನರೇಬಲ್ ಪ್ರದೇಶಗಳಲ್ಲಿ ಭಯಪಡಿಸುವ ಅಥವಾ ಅನಗತ್ಯ ಪ್ರಭಾವ ಬಿರುವ ಒಟ್ಟು 12 ವ್ಯಕ್ತಿಗಳನ್ನು ಗುರುತಿಸಿದ್ದು, ಅವರ ಮೇಲೆ ಸಿ.ಆರ್.ಪಿ.ಸಿ ಅಡಿಯಲ್ಲಿ ಮುಂಜಾಗೃತ ಕ್ರಮ ಜರುಗಿಸಲಾಗಿದೆ. ದೈಹಿಕ ಅಪರಾಧ ಪ್ರಕರಣಗಳಿಗೆ ಸಂಭಂದಿಸಿದ ಜಾಮೀನು ರಹಿತ ವಾರೆಂಟ್‌ಗಳನ್ನು ಜಾರಿ ಮಾಡಲಾಗಿದೆ ಎಂದು ಅವರು ತಿಳಿಸಿದ್ದಾರೆ.

ಹುಬ್ಬಳ್ಳಿ-ಧಾರವಾಡ ನಗರದಲ್ಲಿ ಒಟ್ಟು 955 ಪರವಾನಿಗೆ ಹೊಂದಿದ ಆಯುಧಗಳಿದ್ದು, ಅವುಗಳಲ್ಲಿನ 726 ಆಯುಧಗಳನ್ನು ಜಮಾ ಮಾಡಿಕೊಳ್ಳಲಾಗಿದೆ. ಉಳಿದವುಗಳನ್ನು ಮಾರ್ಚ್ 25ರ ಒಳಗಾಗಿ ಜಮಾ ಮಾಡಲು ಸೂಚಿಸಲಾಗಿದೆ ಎಂದು ಹೇಳಿದ್ದಾರೆ.

ಲೋಕಸಭಾ ಚುನಾವಣೆ ಬಂದೋಬಸ್ತಗಾಗಿ ಸಿ.ಐ.ಎಸ್.ಎಫ್. ಒಂದು ಕಂಪನಿ ಹುಬ್ಬಳ್ಳಿ-ಧಾರವಾಡ ನಗರಕ್ಕೆ ಬಂದಿದ್ದು, ಪ್ರತಿ ದಿನ ಒಂದೊಂದು ಠಾಣೆಗಳಲ್ಲಿನ ವಲ್ನರೇಬಲ್ ಪ್ರದೇಶಗಳಿಗೆ ಠಾಣಾ ಅಧಿಕಾರಿ ಮತ್ತು ಸಿಬ್ಬಂದಿಯೊಂದಿಗೆ ಭೇಟಿ ನೀಡಿ ರೂಟ್ ಮಾರ್ಚ್ ಮಾಡಿ ಜನರಲ್ಲಿ ಆತ್ಮ ವಿಶ್ವಾಸ ಮತ್ತು ಧೈರ್ಯ ತುಂಬುವ ಕೆಲಸ ಮಾಡಲಾಗುತ್ತಿದೆ ಎಂದು ಅವರು ತಿಳಿಸಿದ್ದಾರೆ.

ಚುನಾವಣೆಗೆ ಸಂಬಂಧಿಸಿದಂತೆ ಮತ್ತು ಮತದಾನದ ದಿನ ಮತಗಟ್ಟೆಗಳ ಭದ್ರತೆ ಕುರಿತು ಸಿಬ್ಬಂದಿಗಳ ನಿಯೋಜನೆ ಕುರಿತು ತಯಾರಿ ಮಾಡಿಕೊಳ್ಳಲಾಗಿದೆ. ಮುಕ್ತ ಮತ್ತು ನ್ಯಾಯೋಚಿತ ಚುನಾವಣೆ ಜರುಗಿಸುವ ಕುರಿತು ಎಲ್ಲ ಕ್ರಮಗಳನ್ನು ಕೈಗೊಳ್ಳಲಾಗಿದೆ ಎಂದು ಮಹಾನಗರ ಪೊಲೀಸ್ ಆಯುಕ್ತರಾದ ರೇಣುಕಾ ಸುಕುಮಾರ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

■ವಿಜಯಸಾಕ್ಷಿ ಸುದ್ದಿ, ಧಾರವಾಡ

ಚುನಾವಣಾ ಆಯೋಗದ ನಿರ್ದೇಶನದಂತೆ ಧಾರವಾಡ ಜಿಲ್ಲಾ ಚುನಾವಣಾಧಿಕಾರಿ ದಿವ್ಯ ಪ್ರಭು ಅವರು, ಮನೆಯಿಂದ ಮತದಾನ ಮಾಡಲು ನೋಂದಾಯಿಸಿಕೊಂಡಿರುವ 85 ವರ್ಷ ಮೇಲ್ಪಟ್ಟ ಹಿರಿಯ ನಾಗರಿಕರಿಗೆ ಮತ್ತು ಶೇ.40ಕ್ಕಿಂತ ಹೆಚ್ಚು ಅಂಗವಿಕಲತೆ ಹೊಂದಿರುವ ಜಿಲ್ಲೆಯ ಮತದಾರರಿಗ 12ಡಿ ಪಾರ್ಮ್ ವಿತರಿಸಲು ತಿಳಿಸಿದ್ದಾರೆ. ಅದರಂತೆ ಧಾರವಾಡ ಗ್ರಾಮೀಣ ವಿಧಾನಸಭಾ ಮತಕ್ಷೇತ್ರದ ಹಳ್ಳಿಗಳಲ್ಲಿ ಮತಗಟ್ಟೆ ಮಟ್ಟದ ಅಧಿಕಾರಿಗಳು 12ಡಿ ಪಾರ್ಮ್‌ನ್ನು ಕಳೆದ ನಾಲ್ಕು ದಿನಗಳಿಂದ ವಿತರಿಸುತ್ತಿದ್ದಾರೆ.



VIJAYA SAKSHI KANNADA DAILY MORNING Editor, Printer, Publisher, & Owned by : Hussainsab M. Shareefanavar, H.No. 130/154, Balaji Nagar, Near Ring Road, Gadag-582103, Dist : Gadag- Karnataka Printed at : Sai Printing Press, Near Joda Maruti Temple, Gadag-582101, Dist : Gadag- Karnataka